ನಿಮ್ಮ ನಂಬಿಕೆಯ ಧ್ವನಿ

# ಧೈರ್ಯದ ದಾರಿ

DAIRYADA DAARI NEWS PAPER

ಸಂಪಾದಕರು : ಸೈಯದ್ ಅಹ್ಮದ್ ಹುಸೇನಿ ಮತವಾಲೆ

Cell : 6360866626, 9036887793

KANNADA DAILY NEWS PAPER

ಕನ್ನಡ ದಿನಪತ್ರಿಕೆ

DAIRYADA DAARI

RNI NO: KNKAN/25/A2795

EMAIL : dairyadadaari@gmail.com

ಸಂಪುಟ: 01 ಸಂಚಿಕೆ: 192

ಬೆಲೆ ರೂ : 2.00

ರಾಯಚೂರು

ಪುಟ: 4

ಗುರುವಾರ: 09-07-2026


## ಚುನಾವಣಾ ಆಯೋಗ ಕೇಂದ್ರದ ಕೈಗೊಂಬೆ: ಪ್ರಿಯಾಂಕ್ ಆರೋಪ

**ಬೆಂಗಳೂರು, ಜು. 8–** ಕೇಂದ್ರ ಚುನಾವಣಾ ಆಯೋಗ ಕೇಂದ್ರ ಸರ್ಕಾರದ ಕೈಗೊಂಬೆಯಾಗಿದೆ ಎಂದು ಗೃಹ ಸಚಿವ ಪ್ರಿಯಾಂಕ್ ಖರ್ಗೆ ಆರೋಪಿಸಿದರು.

ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಸಂದರ್ಭದಲ್ಲಿ ಎಸ್‌ಐಆರ್ ವಿಚಾರವಾಗಿ ಬಿಜೆಪಿ–ಜೆಡಿಎಸ್ ನಿನ್ನೆ ದೆಹಲಿಯಲ್ಲಿ ಕೇಂದ್ರ ಚುನಾವಣಾ ಆಯುಕ್ತರಿಗೆ ದೂರು ನೀಡಿರುವ ಬಗ್ಗೆ ಪ್ರತಿಕ್ರಿಯಿಸಿ, ನಾನು ಹಿಂದೆಯೇ ದೆಹಲಿಗೆ ಹೋಗಿ ಆಯುಕ್ತರ ಭೇಟಿಗೆ ಕಾಲಾವಕಾಶ ಕೋರಿದ್ದೆ. ಆದರೆ ಅವಕಾಶ ಸಿಗಲಿಲ್ಲ. ಬಿಜೆಪಿ–ಜೆಡಿಎಸ್ ಹೇಳಿದ ತಕ್ಷಣ ಆಯೋಗ ಸ್ಪಂದಿಸುತ್ತದೆ ಎಂದು ದೂರಿದರು.

ಕೇಂದ್ರ ಚುನಾವಣಾ ಆಯೋಗ ನಮ್ಮ ಸಲಹೆಗಳಿಗೆ ಹೇಗೆ ಸ್ಪಂದಿಸುತ್ತದೆ, ಬಿಜೆಪಿ–ಜೆಡಿಎಸ್ ಸಲಹೆಗಳಿಗೆ ಹೇಗೆ ಸ್ಪಂದಿಸುತ್ತದೆ ಎಂಬುದನ್ನು ನೋಡಿದರೆ ಆಯೋಗ ಕೇಂದ್ರ ಸರ್ಕಾರದ ಕೈಗೊಂಬೆಯಾಗಿದೆ ಎಂಬುದು ಗೊತ್ತಾಗುತ್ತದೆ ಎಂದರು.

ನಾವು ಈ ಹಿಂದೆಯೇ ಕೇಂದ್ರ ಚುನಾವಣಾ ಆಯೋಗಕ್ಕೆ 12 ವಿಚಾರಗಳನ್ನು ಗಮನಕ್ಕೆ ತಂದಿದ್ದೆವು. ವೈಜ್ಞಾನಿಕವಾಗಿ, ಸಾಂವಿಧಾನಿಕವಾಗಿ ಮತದಾರರ ಹಕ್ಕನ್ನು ರಕ್ಷಣೆ ಮಾಡಬೇಕು ಎಂದು ಕೇಳಿದ್ದೆವು. ಆದರೆ ಇದ್ಯಾವುದಕ್ಕೂ ಆಯೋಗದಿಂದ ಉತ್ತರ ಬಂದಿಲ್ಲ ಎಂದರು.

ಈಗ ಬಿಜೆಪಿ ಮತ್ತು ಜೆಡಿಎಸ್ ಆಯೋಗಕ್ಕೆ ದೂರು ನೀಡಿವೆ. ಅವರ ದೂರಿಗೆ ಏನು ಮಾಡುತ್ತಾರೆ ನೋಡೋಣ ಎಂದರು.

ಪಶ್ಚಿಮ ಬಂಗಾಳದಲ್ಲೂ ಎಸ್‌ಐಆರ್ ಪ್ರಕ್ರಿಯೆ ಆರಂಭವಾದಾಗ ಪ್ರತಿಭಟನೆ ಮಾಡಿದ್ದು ಬಿಜೆಪಿಯೇ. ಬಿಎಲ್‌ಓಗಳು ಮಮತಾ ಬ್ಯಾನರ್ಜಿಯವರ ಕಪಿಮುಷ್ಟಿಯಲ್ಲಿದ್ದಾರೆ ಎಂದು ಆರೋಪ



ಮಾಡಿ, ದೂರು ಕೊಟ್ಟು, ಆ ಮೇಲೆ ನಿಯಮಗಳನ್ನು ಜಾರಿ ಮಾಡಿದರು. ಇದೆಲ್ಲಾ ಬಿಜೆಪಿಯವರ ಸ್ಟ್ಯಾಂಡರ್ಡ್ ಆಪರೇಷನ್ ಪ್ರೊಸಿಜರ್ ಎಸ್‌ಒಪಿ. ಅವರು ಒಡೆದಂಗೆ ಮಾಡುವುದು, ಇವರು ಅತ್ತಂಗೆ ಮಾಡುವುದು ಇಷ್ಟೇ ಎಂದು ವಾಗ್ದಾಳಿ ನಡೆಸಿದರು. ಬಿಎಲ್‌ಓಗಳನ್ನು ಕಾಂಗ್ರೆಸ್ ದುರುಪಯೋಗಪಡಿಸಿಕೊಳ್ಳುತ್ತಿದೆ ಎಂದು ಬಿಜೆಪಿ–ಜೆಡಿಎಸ್ ಆರೋಪ ಮಾಡಿದ್ದಾರೆ. ಹೇಗೆ ಮಾಡುತ್ತಿದ್ದಾರೆ ಎಂಬ ಬಗ್ಗೆ ಏನನ್ನು ಹೇಳುತ್ತಿಲ್ಲ ಎಂದು ಟೀಕಿಸಿದರು.

ಕೆಲವು ಬಿಎಲ್‌ಓಗಳಿಗೆ ಬೆದರಿಕೆ ಹಾಕಲಾಗುತ್ತಿದೆ ಎಂದು ಹೇಳಿರುವ ಬಗ್ಗೆಯೂ ಪ್ರತಿಕ್ರಿಯಿಸಿದ ಅವರು, ದೂರು ಕೊಡಲಿ ನಾವು ತನಿಖೆ ಮಾಡಿಸುತ್ತೇವೆ ಎಂದರು.

ಬರ ಘೋಷಣೆ ನಮ್ಮ ಜವಾಬ್ದಾರಿಯಲ್ಲ, ಕೇಂದ್ರ ಸರ್ಕಾರದ್ದು. ಕೇಂದ್ರ ಸರ್ಕಾರ ಮಾನದಂಡಗಳ ಪ್ರಕಾರವೇ ವರದಿ ಸಲ್ಲಿಸಬೇಕು. ಆ ವರದಿ ಆಧರಿಸಿ ಕೇಂದ್ರ ಅಧ್ಯಯನ ತಂಡ ಇಲ್ಲಿಗೆ ಬಂದು ವಸ್ತುಸ್ಥಿತಿ ಅಧ್ಯಯನ ಮಾಡಿ ವರದಿ ಕೊಡುತ್ತದೆ. ನಂತರ ಬರ ಘೋಷಣೆಯಾಗುತ್ತದೆ ಎಂದು ಹೇಳಿದರು.

ಮುಖ್ಯಮಂತ್ರಿಗಳು ಬರ ಪರಿಸ್ಥಿತಿಯ ಘೋಷಣೆ ಬಗ್ಗೆ ಈಗಾಗಲೇ ಮಾತನಾಡಿದ್ದಾರೆ. ಪ್ರತಿ ಜಿಲ್ಲೆ, ತಾಲ್ಲೂಕಿಗೆ ಹೋಗಿ ಪರಿಶೀಲನೆ ಮಾಡಿ ವರದಿ ತಯಾರು ಮಾಡುತ್ತೇವೆ. ಕೇಂದ್ರ ಸರ್ಕಾರದ ಮಾನದಂಡದ ಪ್ರಕಾರವೇ ವರದಿ ಸಲ್ಲಿಸಬೇಕು. ವರದಿ ಕೊಡುವುದು ನಮ್ಮ ಜವಾಬ್ದಾರಿ. ಪರಿಹಾರ ಘೋಷಣೆ ಮಾಡುವುದು ಕೇಂದ್ರ ಸರ್ಕಾರದ ಜವಾಬ್ದಾರಿ ಎಂದು ಅವರು ಹೇಳಿದರು.

ಬೆಳಗಾವಿಯಲ್ಲಿ ಆರ್‌ಎಸ್‌ಎಸ್ ಕಾರ್ಯಕ್ರಮ ನಡೆಯುತ್ತಿರುವ ಬಗ್ಗೆ ಪ್ರತಿಕ್ರಿಯಿಸಿದ ಅವರು, ಅದು ಖಾಸಗಿ ಕಾರ್ಯಕ್ರಮ. ನಮ್ಮ ಅನುಮತಿ ಬೇಕಿಲ್ಲ. ಬೀದಿಗಿಳಿದು ಮೆರವಣಿಗೆ ಮಾಡಬೇಕಾದರೆ ನಮ್ಮ ಅನುಮತಿ ಬೇಕಾಗುತ್ತದೆ. ಬೀದಿಗಿಳಿದು ಮೆರವಣಿಗೆ ಮಾಡುವಾಗ ನಮ್ಮ ಅನುಮತಿ ಕೇಳುತ್ತಾರೆ. ಕಾನೂನು ಸುವ್ಯವಸ್ಥೆ ಎಲ್ಲವನ್ನು ನೋಡಿಕೊಂಡು ನಾವು ಅನುಮತಿ ಕೊಡುತ್ತೇವೆ. ಇಲ್ಲದಿದ್ದರೆ ಮುಂದೂಡಿ ಎಂದು ಹೇಳುತ್ತೇವೆ ಎಂದರು.

ಸಚಿವ ಸಂಪುಟ ವಿಸ್ತರಣೆ ಬಗ್ಗೆ ಮುಖ್ಯಮಂತ್ರಿಗಳು ಈಗಾಗಲೇ ಹೇಳಿದ್ದಾರೆ. ಪೂರ್ಣ ಪ್ರಮಾಣದ ಸಂಪುಟ ಇದ್ದರೆ ಉತ್ತಮವಾಗಿ ಕೆಲಸ ಮಾಡಲು ಸಾಧ್ಯ ಎಂಬುದು ಮುಖ್ಯಮಂತ್ರಿಗಳಿಗೆ ಗೊತ್ತಿದೆ. ಎಲ್ಲವೂ ಆದಷ್ಟು ಬೇಗ ಆಗುತ್ತದೆ ಎಂದು ಅವರು ಹೇಳಿದರು.

## ಮಾನ್ವಿ ತಾಲೂಕ ಯುವ ದಲಿತ ಸಾಹಿತ್ಯ ಪರಿಷತ್ ಅಧ್ಯಕ್ಷರಾಗಿ ಅಂಜನೇಯ್ಯ ಸುಂಕೇಶ್ವರ ಪದಗ್ರಹಣ



ಧೈರ್ಯದ ದಾರಿ

**ಮಾನ್ವಿ :** ಸಿಂದನೂರು ನಗರದ ಮಹಿಳಾ ಪದವಿ ಮಹಾವಿದ್ಯಾಲಯದಲ್ಲಿ ನಡೆದ ದಲಿತ ಸಾಹಿತ್ಯ ಪರಿಷತ್ ಜಿಲ್ಲಾ ಮತ್ತು ತಾಲೂಕು ಘಟಕಗಳ ನೂತನ ಪದಾಧಿಕಾರಿಗಳ ಪದಗ್ರಹಣ ಹಾಗೂ ಸನ್ಮಾನ ಸಮಾರಂಭವು ಯಶಸ್ವಿಯಾಗಿ ಜರುಗಿತು.

ಮಾನ್ವಿ ತಾಲೂಕ ಯುವ ದಲಿತ ಸಾಹಿತ್ಯ ಪರಿಷತ್ ಅಧ್ಯಕ್ಷರಾಗಿ ಆಂಜನೇಯ್ಯ ಸುಂಕೇಶ್ವರ ಪದಗ್ರಹಣ ಸ್ವೀಕರಿಸಿದರು.

ನಂತರ ಕಾರ್ಯಕ್ರಮವನ್ನು ಉದ್ದೇಶಿಸಿ ಮಾತನಾಡಿದ ದಲಿತ ಸಾಹಿತ್ಯ ಪರಿಷತ್ ರಾಜ್ಯಾಧ್ಯಕ್ಷರಾದ ಅರ್ಜುನ್ ಗೋಳಸಂಗಿ ಅವರು ಮಾತನಾಡಿ ದೇಶದಲ್ಲಿ ಅಸ್ಪೃಶ್ಯತೆಯ ನಿರ್ಮೂಲನೆ ಮತ್ತು ಸಾಮಾಜಿಕ ಸಮಾನತೆ ಯ ಅಗತ್ಯತೆಯನ್ನು ಬಲವಾಗಿ ಪ್ರತಿಪಾದಿಸಿದರು. ಸ್ವಾತಂತ್ರ್ಯ ಬಂದು 80 ವರ್ಷ ಸನಿಹದಲ್ಲಿದ್ದರೂ ಬದಲಾಗದ ವ್ಯವಸ್ಥೆ ಸೃಷ್ಟಿಯಾಗಿದೆ ಎಂದು ಆಕ್ರೋಶ ವ್ಯಕ್ತಪಡಿಸಿದರು. ಪದಾಧಿಕಾರಿಗಳಿಗೆ ಪದಗ್ರಹಣ ಮತ್ತು ಗೌರವ ಸನ್ಮಾನದ ಮೂಲಕ ಅಧಿಕಾರ ಹಸ್ತಾಂತರಿಸಲಾಯಿತು. ಇದೇ ಸಂದರ್ಭದಲ್ಲಿ ಸಂಘಟನೆ ಹಾಗೂ ಸಮಾಜದ ಪ್ರಮುಖರಾದ ಸಿಂದನೂರಿನ ಹಿರಿಯ ಪತ್ರಕರ್ತ ಡಿ.ಎಸ್.ಕಂಬಳಿ, ರಾಮಣ್ಣ ಸಿಂದನೂರು, ಲಕ್ಷ್ಮಣ ಜಾನೇಕಲ್ ಸೇರಿದಂತೆ ಹಲವು ಗಣ್ಯರನ್ನು ಅತ್ಯಂತ ಗೌರವಪೂರ್ವಕವಾಗಿ ಸನ್ಮಾನಿಸಲಾಯಿತು. ಸಮಾರಂಭದಲ್ಲಿ ಎಚ್.ಎಫ್. ಸಂಯೋಜಕರು , ಕಲ್ಬುರ್ಗಿ ವಿಭಾಗ, ಹುಸೇನಪ್ಪ ಅಮರಪುರ ಜಿಲ್ಲಾಧ್ಯಕ್ಷರು ದಲಿತ ಸಾಹಿತ್ಯ ಪರಿಷತ್ ರಾಯಚೂರು, ರಾಘವೇಂದ್ರ ಚೌಡ್ಕಿ ಜಿಲ್ಲಾ ಉಪಾಧ್ಯಕ್ಷರು ದಲಿತ ಸಾಹಿತ್ಯ ಪರಿಷತ್ ರಾಯಚೂರು, ಸನ್ಮಾನಿತರಾದ ಕರಿಗೂಳಿ ಸಹಾಯಕ ಪ್ರಾಧ್ಯಾಪಕರು ಹಾಗೂ ಹಿರಿಯ ಚಿಂತಕರು ಗಂಗಾವತಿ, ತಾಲೂಕು ಪ್ರಮುಖ ಮುಖಂಡರು,ಅಮರೇಶ ವೆಂಕಟಾಪುರ, ಸುರೇಶ ಮಾಚನೂರು,ಸುಭಾಷ್ ಚಿಂಚರಕಿ ಪತ್ರಕರ್ತರು, ಮಲ್ಲಿಕಾರ್ಜುನ ಕಡರ್ಚು, ಚನ್ನಬಸಪ್ಪ ಯಲಘಟ್ಟ ಪತ್ರಕರ್ತರು, ಬಾಬು ಹಟ್ಟಿ ಹಾಗೂ ರಾಯಚೂರು ಜಿಲ್ಲೆಯ ವಿವಿಧ ತಾಲೂಕುಗಳಿಂದ ಆಗಮಿಸಿದ ನೂರಾರು ಸಾಹಿತ್ಯಾಸಕ್ತರು, ದಲಿತ ಸಂಘಟನೆಯ ಪದಾಧಿಕಾರಿಗಳು ಹಾಗೂ ಚಿಂತಕರು ದಲಿತ ಸಾಹಿತ್ಯ ಪರಿಷತ್ ಪ್ರಮುಖ ನಾಯಕರು, ಪದಾಧಿಕಾರಿಗಳು ಹಾಗೂ ವಿವಿಧ ಪಕ್ಷಗಳ ಮುಖಂಡರು ಭಾಗವಹಿಸಿದ್ದರು.


ಸುದ್ದಿ ಮತ್ತು ಜಾಹೀರಾತಿಗಾಗಿ ಸಂಪರ್ಕಿಸಿ

6360866626


## ಸರ್ಕಾರದ ಆದೇಶವಿದ್ದರೂ ನಾಡಕಚೇರಿಯಲ್ಲಿ ತಾಂತ್ರಿಕ ದೋಷ: ವಂಚಿತರಾದ ಗೊಲ್ಲ ಸಮುದಾಯದ ವಿದ್ಯಾರ್ಥಿಗಳು.

ಧೈರ್ಯದ ದಾರಿ

**ಸಿರವಾರ:** ರಾಜ್ಯದ ವಸತಿ ಶಾಲೆಗಳ ಪ್ರವೇಶಾತಿಯಲ್ಲಿ ಗೊಲ್ಲ (ಯಾದವ) ಸಮುದಾಯದ ಅಲೆಮಾರಿ ಮತ್ತು ಅರೆ–ಅಲೆಮಾರಿ ವಿದ್ಯಾರ್ಥಿಗಳಿಗೆ ಸರ್ಕಾರ ಶೇ. 10 ರಷ್ಟು ಮೀಸಲಾತಿ ಕಲ್ಪಿಸಿದೆ. ಆದರೆ, 'ನಾಡಕಚೇರಿ' ತಂತ್ರಾಂಶದಲ್ಲಿ ಉಂಟಾಗಿರುವ ತಾಂತ್ರಿಕ ದೋಷದಿಂದಾಗಿ ನೂರಾರು ವಿದ್ಯಾರ್ಥಿಗಳು ಈ ಸೌಲಭ್ಯದಿಂದ ವಂಚಿತರಾಗುತ್ತಿದ್ದಾರೆ ಎಂದು ಯುವ ಯಾದವ ಸಂಘದ ತಾಲ್ಲೂಕು ಪ್ರಧಾನ ಕಾರ್ಯದರ್ಶಿ ರಾಜು ಯಾದವ್ ತೀವ್ರ ಅಸಮಾಧಾನ ವ್ಯಕ್ತಪಡಿಸಿದ್ದಾರೆ.

ತಂತ್ರಾಂಶದಲ್ಲಿ ಇಲ್ಲ ಪ್ರಮಾಣಪತ್ರದ ಆಯ್ಕೆ

ಈ ಕುರಿತು ಸಿರವಾರ ತಹಶೀಲ್ದಾರರಿಗೆ ಮನವಿ ಸಲ್ಲಿಸಿ ಮಾತನಾಡಿದ ರಾಜು ಯಾದವ್, "ಸರ್ಕಾರದ ಸ್ಪಷ್ಟ ಆದೇಶವಿದ್ದರೂ, ನಾಡಕಚೇರಿ ತಂತ್ರಾಂಶದಲ್ಲಿ 'ಅಲೆಮಾರಿ ಪ್ರಮಾಣಪತ್ರ' (Nomadic Tribe Certificate) ಪಡೆಯಲು ಅಗತ್ಯವಿರುವ ಆಯ್ಕೆಯು (Option) ಲಭ್ಯವಿಲ್ಲ. ಇದರಿಂದಾಗಿ ಮುರಾರ್ಜಿ ದೇಸಾಯಿ ಮತ್ತು ಕಿತ್ತೂರು ರಾಣಿ ಚೆನ್ನಮ್ಮ ವಸತಿ ಶಾಲೆಗಳಿಗೆ ಅರ್ಜಿ ಸಲ್ಲಿಸಲು ವಿದ್ಯಾರ್ಥಿಗಳು ಪರದಾಡುವಂತಾಗಿದೆ," ಎಂದು ತಿಳಿಸಿದರು.

ಉಗ್ರ ಪ್ರತಿಭಟನೆಯ ಎಚ್ಚರಿಕೆ

ತಾಂತ್ರಿಕ ಸಮಸ್ಯೆಯನ್ನು ತಕ್ಷಣವೇ ಬಗೆಹರಿಸಿ, ಬಡ



ವಿದ್ಯಾರ್ಥಿಗಳು ಸಕಾಲದಲ್ಲಿ ಅರ್ಜಿ ಸಲ್ಲಿಸಲು ಅನುವು ಮಾಡಿಕೊಡಬೇಕು. ಒಂದು ವೇಳೆ ಕಂದಾಯ ಇಲಾಖೆಯ ಅಧಿಕಾರಿಗಳು ಈ ಸಮಸ್ಯೆಗೆ ತಕ್ಷಣ ಸ್ಪಂದಿಸದಿದ್ದರೆ, ಮುಂದಿನ ದಿನಗಳಲ್ಲಿ ಉಗ್ರ ಪ್ರತಿಭಟನೆ ನಡೆಸಲಾಗುವುದು ಎಂದು ಅವರು ಎಚ್ಚರಿಸಿದರು. ಈ ಸಂದರ್ಭದಲ್ಲಿ ಸಮಾಜದ ಮುಖಂಡರಾದ ಕೃಷ್ಣ ಯಾದವ್ ಕಲ್ಲೂರ್, ದತ್ತಾತ್ರೇಯ ಯಾದವ್, ಗೋಪಾಲ ಯಾದವ್, ಶ್ರೀನಿವಾಸ್ ಯಾದವ್, ಆಂಜನೇಯ್ಯ ಯಾದವ್, ಕೆಂಚಣ್ಣ ಯಾದವ್, ಶಿವರಾಜ್ ಯಾದವ್, ನರಸಣ್ಣ ಯಾದವ್ ಸೇರಿದಂತೆ ಸಮುದಾಯದ ಪ್ರಮುಖರು ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

## ಬಿ.ಎಲ್.ಓ.ರವರ ಕಾರ್ಯಕ್ಕೆ ಮತದಾರರು ಸಹಕರಿಸಿ, ಎಸ್.ಐ.ಆರ್. ಕಾರ್ಯಕ್ರಮ ಯಶಸ್ವಿಗೊಳಿಸಿ: ಡಾ. ದಂಡಪ್ಪ ಬಿರಾದಾರ

ಧೈರ್ಯದ ದಾರಿ




**ರಾಯಚೂರು, ಜು. 8:** ಭಾರತ ಚುನಾವಣಾ ಆಯೋಗದ ನಿರ್ದೇಶನದಂತೆ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಮಹಾನಗರ ಪಾಲಿಕೆ ಸ್ವೀಪ್ ಸಮಿತಿ ರಾಯಚೂರು ಹಾಗೂ ಕಾಲೇಜಿನ ಮತದಾರ ಸಾಕ್ಷರತಾ ಕ್ಲಬ್ ಸಂಯುಕ್ತ ಆಶ್ರಯದಲ್ಲಿ ಮತದಾರರ ಪಟ್ಟಿಯ ವಿಶೇಷ ಸಮಗ್ರ ಪರಿಷ್ಕರಣೆ (ಎಸ್.ಐ.ಆರ್.) ಕುರಿತು ಎಸ್.ಕೆ.ಇ.ಎಸ್. ಪ್ಯಾರಾ ಮೆಡಿಕಲ್ ಕಾಲೇಜಿನಲ್ಲಿ ಜಾಗೃತಿ ಕಾರ್ಯಕ್ರಮ ನಡೆಯಿತು.

ಕಾರ್ಯಕ್ರಮವನ್ನು ಸಸಿಗೆ ನೀರುಣಿಸುವ ಮೂಲಕ ಉದ್ಘಾಟಿಸಿ ಮಾತನಾಡಿದ ಸ್ವೀಪ್ ಸಮಿತಿಯ ಶಿಕ್ಷಣ ವಿಭಾಗದ ನೋಡಲ್ ಅಧಿಕಾರಿ ಹಾಗೂ ಎಸ್.ಐ.ಆರ್. ಕಾರ್ಯಕ್ರಮದ ಸಂಯೋಜನಾಧಿಕಾರಿ ಡಾ. ದಂಡಪ್ಪ ಬಿರಾದಾರ, ಬೂತ್ ಮಟ್ಟದ ಅಧಿಕಾರಿಗಳು (ಬಿ.ಎಲ್.ಓ.) ಮನೆ ಮನೆಗೆ ತೆರಳಿ ಮತದಾರರಿಗೆ ನಿಗದಿತ ನಮೂನೆಗಳನ್ನು ವಿತರಿಸಿ, ಭರ್ತಿ ಮಾಡಿದ ಅರ್ಜಿಗಳನ್ನು ಸಂಗ್ರಹಿಸುವ ಕಾರ್ಯವನ್ನು ಶ್ರದ್ಧೆಯಿಂದ ನಿರ್ವಹಿಸುತ್ತಿದ್ದಾರೆ. ಸಾರ್ವಜನಿಕರು ಮತ್ತು ಮತದಾರರು ಅಗತ್ಯ ಮಾಹಿತಿಯನ್ನು ನೀಡಿ ಬಿ.ಎಲ್.ಓ.ರವರ ಕಾರ್ಯಕ್ಕೆ ಸಂಪೂರ್ಣ ಸಹಕಾರ ನೀಡಬೇಕು ಎಂದು ಮನವಿ ಮಾಡಿದರು.

ಮತದಾರರು ಮನೆಯಲ್ಲಿ ಇಲ್ಲದಿದ್ದಲ್ಲಿ ಬಿ.ಎಲ್.ಓ.ಗಳು ಗರಿಷ್ಠ ಮೂರು ಬಾರಿ ಮನೆಗೆ ಭೇಟಿ ನೀಡಲಿದ್ದು, ಭರ್ತಿ ಮಾಡಿದ ನಮೂನೆಗಳನ್ನು ಪಡೆದು ಸ್ವೀಕೃತಿ ಪತ್ರವನ್ನು ನೀಡಲಿದ್ದಾರೆ ಎಂದು ತಿಳಿಸಿದರು. ಆಗಸ್ಟ್ 5, 2026ರಂದು ಕರಡು ಮತದಾರರ ಪಟ್ಟಿ ಪ್ರಕಟವಾಗಲಿದೆ. ಅರ್ಹ ಮತದಾರರ ಹೆಸರು ಪಟ್ಟಿಯಲ್ಲಿ ಸೇರ್ಪಡೆಯಾಗದಿದ್ದರೆ, ಸಂಬಂಧಿಸಿದ ಮತದಾರ ನೋಂದಣಿ ಅಧಿಕಾರಿಗೆ ಅಗತ್ಯ ದಾಖಲೆಗಳೊಂದಿಗೆ ಆಕ್ಷೇಪಣೆ ಸಲ್ಲಿಸಲು ಅವಕಾಶವಿದೆ ಎಂದು ಹೇಳಿದರು. ಕಾರ್ಯಕ್ರಮದಲ್ಲಿ ಎಸ್.ಕೆ.ಇ.ಎಸ್. ಪ್ಯಾರಾ ಮೆಡಿಕಲ್ ಸಂಸ್ಥೆಯ ಮುಖ್ಯಸ್ಥರು ಹಾಗೂ ಪ್ರಾಂಶುಪಾಲರಾದ ಡಾ. ಬಾಬುರಾವ್ ಶೇಗುಣೇಶ್ ಮಾತನಾಡಿ, ಎಸ್.ಐ.ಆರ್. ಕಾರ್ಯಕ್ರಮ ಯಶಸ್ವಿಯಾದರೆ ಚುನಾವಣಾ ಪ್ರಕ್ರಿಯೆ ಇನ್ನಷ್ಟು ಪಾರದರ್ಶಕವಾಗಲಿದೆ. 18 ವರ್ಷ ಪೂರ್ಣಗೊಂಡ ಪ್ರತಿಯೊಬ್ಬ ಯುವಕ–ಯುವತಿಯೂ ಮತದಾರರ ಪಟ್ಟಿಯಲ್ಲಿ ತಮ್ಮ ಹೆಸರನ್ನು ನೋಂದಾಯಿಸಿಕೊಳ್ಳಬೇಕು. ಕುಟುಂಬದಲ್ಲಿರುವ ಪ್ರತಿಯೊಬ್ಬ ಅರ್ಹ ನಾಗರಿಕರ ಹೆಸರೂ ಮತದಾರರ ಪಟ್ಟಿಯಲ್ಲಿ ಇರುವಂತೆ ಯುವಕರು ಹಾಗೂ ವಿದ್ಯಾರ್ಥಿಗಳು ಜಾಗೃತಿ ಮೂಡಿಸಬೇಕು ಎಂದು ಕರೆ ನೀಡಿದರು.

ಕಾರ್ಯಕ್ರಮದಲ್ಲಿ ಶ್ರೀಮತಿ ಸುಖಲತಾ ಪ್ರಾರ್ಥನಾ ಗೀತೆ ಹಾಡಿದರು. ಜಿಲ್ಲಾ ಪಂಚಾಯತ್ ಕಚೇರಿಯ ಸಲಿಂ ಮಲಿಕ್, ರಂಗಣ್ಣ, ಎಸ್.ಕೆ.ಇ.ಎಸ್. ಪ್ಯಾರಾ ಮೆಡಿಕಲ್ ಸಂಸ್ಥೆಯ ನಂದ್ಯಾಳ ಹನುಮಂತಪ್ಪ ಹಾಗೂ ಕಾಲೇಜಿನ ವಿದ್ಯಾರ್ಥಿಗಳು ಭಾಗವಹಿಸಿದ್ದರು.

## ಆದಿಕವಿ ಮಹರ್ಷಿ ವಾಲ್ಮೀಕಿ ವಿಶ್ವವಿದ್ಯಾಲಯದಲ್ಲಿ ಎಸ್‌ಐಆರ್ ಜಾಗೃತಿ ಕಾರ್ಯಕ್ರಮ

ಧೈರ್ಯದ ದಾರಿ

ಜಿಲ್ಲಾಡಳಿತ .ಜಿಲ್ಲಾ ಪಂಚಾಯತ್. ಸ್ವೀಪ್ ಸಮಿತಿ .ಹಾಗೂ ಮತದಾರ ಸಾಕ್ಷರತಾ ಕ್ಲಬ್ ಎನ್‌ಎಸ್‌ಎಸ್ ಘಟಕ ಆದಿಕವಿ ಮಹರ್ಷಿ ವಾಲ್ಮೀಕಿ ವಿಶ್ವವಿದ್ಯಾಲಯದಲ್ಲಿ ಮತದಾರ ಪಟ್ಟಿಯ ವಿಶೇಷ ಸಮಗ್ರ ಪರಿಷ್ಕಣೆಯ ಜಾಗೃತಿ ಕಾರ್ಯಕ್ರಮವು ಜರುಗಿತು.



ಕಾರ್ಯಕ್ರಮವನ್ನು ಉದ್ಘಾಟನೆ ಮಾಡಿ ವಿಶ್ವವಿದ್ಯಾಲಯದ ಕುಲಪತಿಗಳಾದ ಪ್ರೊಫೆಸರ್ ಶಿವಾನಂದ್ ಕೆಳಗಿನಮನಿ ಇವರು ಮಾತನಾಡುತ್ತಾ .ಇಂದು ನಮ್ಮದೇ ರಾಯಚೂರು ಜಿಲ್ಲೆಯಲ್ಲಿ ಪ್ರತಿಯೊಬ್ಬ ಅರ್ಹ ಮತದಾರನ್ನು ಮತದಾರರ ಪಟ್ಟಿಯಲ್ಲಿ ಸೇರಿಸುವ ಪ್ರಕ್ರಿಯೆ ಪ್ರಾರಂಭ ಆಗಿದ್ದು. 18 ವರ್ಷ ತುಂಬಿದ ಮತದಾರರು ಕಡ್ಡಾಯ ಹೊಸದಾಗಿ ಮತದಾರರ ಪಟ್ಟಿಯಲ್ಲಿ. ತಮ್ಮ ಹೆಸರನ್ನು ಸೇರಿಸಲಿಕ್ಕೆ ಅರ್ಜಿಯನ್ನು ಬಿ ಎಲ್ ಓ ರವರ ಮೂಲಕ ಹಾಕಬೇಕು.

ಮತದಾರರ ಸಹಾಯಕ್ಕಾಗಿ ನಗರ ಮತ್ತು ಗ್ರಾಮೀಣ ಪ್ರದೇಶಗಳಲ್ಲಿ ಮತದಾರರ ಸಹಾಯ ಕೇಂದ್ರವನ್ನು ಸ್ಥಾಪಿಸಲಾಗಿದ್ದು ತಮಗೆ ಏನಾದ್ರು ಸಂಶೆಗಳಿದ್ದರೆ ದೂರವಾಣಿ ಮೂಲಕ ಪರಿಹರಿಸಿಕೊಳ್ಳಬಹುದು. ಮತಗಟ್ಟೆ ಅಧಿಕಾರಿಗಳು ಮನೆಮನೆಗೆ ಭೇಟಿ ನೀಡಿ ಸಂಬಂಧಿತ ಮತದಾರರಿಗೆ ನಮೂನೆ (ಫಾರ್ಮ್) ಕೊಡವ ಕಾರ್ಯವನ್ನು ಮಾಡುತ್ತಿದ್ದಾರೆ ಪ್ರತಿಯೊಬ್ಬ ಮತದಾರರು ಮತದಾರ ಪಟ್ಟಿಯ ಹೆಸರನ್ನು ಸೇರ್ಪಡೆ ಮಾಡಿ ಎಸ್‌ಐಆರ್ ಕಾರ್ಯಕ್ರಮದ ಯಶಸ್ವಿಗೆ ಸಹಕರಿಸಬೇಕೆಂದು ಕರೆ ನೀಡಿದರು.

ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದ ಸೀಪ ಸಮಿತಿಯ ನೊಡಲ್ ಹಾಗೂ ಎಸ್‌ಐಆರ್ ಕಾರ್ಯಕ್ರಮಗಳ ಸಂಯೋಜನೆ ಅಧಿಕಾರಿ ಡಾ ದಂಡಪ್ಪ ಬಿರಾದಾರ ಮಾತನಾಡುತ್ತಾ .ಭಾರತವು ಪ್ರಜಾಪ್ರಭುತ್ವ ರಾಷ್ಟವಾಗಿದ್ದು. ನಮ್ಮ ಜನನಾಯಕನ ಆಯ್ಕೆ ಮಾಡಲು ಚುನಾವಣಾ ಆಯೋಗ ಮತ್ತು ಸ0ವಿಧಾನ ನಮಗೆ ಮತದಾನ ನೀಡಿದೆ. ಅಹರ ಮತದಾರನ್ನು ಮತದಾರ ಪಟ್ಟಿಯಲ್ಲಿ ಸೇರಿಸಬೇಕೆಂಬುದು ಎಸ್‌ಐಆರ್ ಕಾರ್ಯಕ್ರಮದ ಮಹತ್ವದ ಉದ್ದೇಶ. ಎಸ್‌ಐಆರ್ ಕಾರ್ಯಕ್ರಮಕ್ಕೆ ಸಹಕರಿಸಿರಿ ಪ್ರಜಾಪ್ರಭುತ್ವ ಹಬ್ಬವನ್ನು ಯಶಸ್ವಿಗೊಳಿಸಿರಿ. ಮತದಾರರ ಪಟ್ಟಿಯ ಪರಿಷ್ಕರಣೆ ಜಾಗೃತಿ ನಾಗರಿಕರ ಹೊಣೆಗಾರಿಕೆ. ಮತದಾರರ ಪಟ್ಟಿ ಸ್ಪಷ್ಟವಾಗಿ. ಶುದ್ಧವಾಗಿ ಸರಿಯಾಗಲಿ ಪ್ರಜಾಪ್ರಭುತ್ವ ಬಲವಾಗಲಿ .ಪ್ರತಿಯೊಬ್ಬ 18 ವರ್ಷ ತುಂಬಿದ ಮಹಿಳೆಯರಿರಬಹುದು ಪುರುಷರಿರಬಹುದು ತಪ್ಪದೇ ತಮ್ಮ ಬಿ ಎಲ್ ಓ ಸಂಪರ್ಕ ಮಾಡಿ ಈಗಾಗಲೇ ಬಿ ಎಸ್ ಅವರು ಮನೆ ಮನೆಗೆ ನಮೋನಿಗಳನ್ನ ಕೊಡುವಂತ ಪ್ರಕ್ರಿಯೆದಲ್ಲಿ ತೊಡಗಿದ್ದಾರೆ .ಅವರ ಸಹಕರಿಸಿರಿ ಎಸ್‌ಐಆರ್ ಕಾರ್ಯಕ್ರಮವನ್ನು ಯಶಸ್ವಿಗೊಳಿಸಿರಿ ಕರ್ನಾಟಕ ರಾಜ್ಯದಲ್ಲಿ ರಾಯಚೂರು ಜಿಲ್ಲೆ ಎಸ್‌ಐಆರ್ ಕಾರ್ಯಕ್ರಮದಲ್ಲಿ ಉತ್ತಮ ಹೆಸರು ಪಡೆಯಲಿಕ್ಕೆ ತಮ್ಮ ಸಹಕಾರಿ ಇರಲೆಂದು ಡಾ. ಬಿರಾದಾರ್ ಹೇಳಿದರು . 2ನೇಪುಟಕ್ಕೆ

ಮೊದಲನೇ ಪುಟದಿಂದ

# ಆದಿಕವಿ ಮಹರ್ಷಿ ವಾಲ್ಮೀಕಿ ವಿಶ್ವವಿದ್ಯಾಲಯದಲ್ಲಿ ಎಸ್ಐಆರ್ ಜಾಗೃತಿ ಕಾರ್ಯಕ್ರಮ

ಈ ಸಂದರ್ಭದಲ್ಲಿ ವೇದಿಕೆಯ ಮೇಲೆ ವಿಶ್ವವಿದ್ಯಾಲಯದ ಕುಲ ಸಚಿವರಾದ ಡಾ. ವೆಂಕಟೇಶ್ ಎನ್.ಎನ್.ಎಸ್ ಯೋಜನೆ ಅಧಿಕಾರಿ ಮತದಾರರ ಸಾಕ್ಷರತಾ ಕ್ಲಬ್ ನೋಡಲ್ ಅಧಿಕಾರಿ ಡಾ. ಜಿ.ಎಸ್ .ಬಿರಾದಾರ್ ಡಾ.ಪ್ರೊಫೆಸರ್ ಪಾರ್ವತಿ ಸಿಎಸ್.ಡಾ. ಲತಾ ಎಂ ಎಸ್ ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು ಉಪನ್ಯಾಸಕರಾದ ಚಂದ್ರಶೇಖರ್ ಅವರು ಕಾರ್ಯಕ್ರಮ ನಿರ್ವಹಿಸಿ ಕೊನೆಯಲ್ಲಿ ವಂದಿಸಿದರು ಈ ಸಂದರ್ಭದಲ್ಲಿ ವಿಶ್ವವಿದ್ಯಾಲಯದ ವಿವಿಧ ಭಾಗದ ವಿದ್ಯಾರ್ಥಿಗಳು ಹಾಗೂ ಯರಗೇರಾ ಗ್ರಾಮ ಪಂಚಾಯತಿಯ ಕಾರ್ಯದರ್ಶಿ ರವಿ ಮತ್ತು ಸಿಬ್ಬಂದಿ ತಿಮ್ಮಪ್ಪನವರು ಭಾಗವಹಿಸಿದ್ದರು

# ಎಂ ಎಸ್ ಪಾಟೀಲ್ ರವರಿಗೆ ಕರ್ನಾಟಕ ಸರ್ಕಾರದ ಮಾಜಿ ಸಚಿವರಾದ ಅಮರೇಗೌಡ ಪಾಟೀಲ ಬಯ್ಯಾಪೂರ ವರಿಂದ ಸನ್ಮಾನ

ಧೈರ್ಯದ ದಾರಿ



ಎಂಎಸ್ ಪಾಟೀಲ್ ಅವರ ಜೀವನ ಮತ್ತು ಸಾಧನೆಯ .ವಾಗಿದ ಮುತ್ಸದ್ದಿ ಗ್ರಂಥ ಲೋಕಾರ್ಪಣೆ ಹಾಗೂ ಅಭಿನಂದನಾ ಕಾರ್ಯಕ್ರಮದ ಹಿನ್ನೆಲೆಯಲ್ಲಿ ಕರ್ನಾಟಕ ಸರ್ಕಾರದ ಮಾಜಿ ಸಚಿವರಾದ ಅಮರೇಗೌಡ ಪಾಟೀಲ್ ಬಯ್ಯಾಪರವರು ಕರ್ನಾಟಕ ಸರ್ಕಾರದ ಮಾಜಿ ಸಚಿವರು ಹಾಗೂ ವಿಧಾನ ಸಭೆಯ ಉಪಸಭಾಧ್ಯಕ್ಷರಾದ ಎಂ.ಎಸ್ ಪಾಟೀಲ್ ಇವರನ್ನು ಸನ್ಮಾನಿಸಿ ಗೌರವಿಸಿದರು. ಈ ಸಂದರ್ಭದಲ್ಲಿ ವಿಧಾನ ಪರಿಷತ್ತಿನ ಸದಸ್ಯರಾದ ಶರಣಗೌಡ ಪಾಟೀಲ್ ಬಯ್ಯಾಪುರ ಜಿಲ್ಲಾ ಪಂಚಾಯತ ಮಾಜಿ ಅಧ್ಯಕ್ಷರಾದ ಜಿ.ಗುಂಡಪ್ಪ ನಾಯಕ್ ಸರ್ಜಾಪುರ್ . ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ಮಾಜಿ ಅಧ್ಯಕ್ಷ ಮಹಾಂತೇಶ್ ಮಸ್ಕಿ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ಸಹ ಕಾರ್ಯದರ್ಶಿಯಾದ ಡಾ. ದಂಡಪ್ಪ ಬಿರಾದಾರ ಬಸವರಾಜ್ ಗಣೆಕಲ್ ಚನ್ನಾರೆಡ್ಡಿ ಬಿರಾದಾರ್ ಕನ್ನಡ ಸಾಹಿತ್ಯ ಪರಿಷತ್ತಿನ ಸಹ ಕಾರ್ಯದರ್ಶಿಯಾದ ಡಾ. ದಂಡಪ್ಪ ಬಿರಾದಾರ ಏಕ ಅಮರಣ್ಣ ಸರ್ಜಾಪುರ .ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು

# ಕೋ-ಆಪರೇಟಿವ್ ಮ್ಯಾನೇಜ್‌ಮೆಂಟ್ ತರಬೇತಿಗೆ ಅರ್ಜಿ ಆಹ್ವಾನ

**ರಾಯಚೂರು ಜುಲೈ 08;** ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳವು ಕಲಬುರಗಿಯಲ್ಲಿ ಕರ್ನಾಟಕ ಇನ್ಸಿಟ್ಯೂಟ್ ಆಫ್ ಕೋ-ಆಪರೇಟಿವ್ ಮ್ಯಾನೇಜ್‌ಮೆಂಟ್ ತರಬೇತಿ ಸಂಸ್ಥೆ ನಡೆಸುತ್ತಿದ್ದು. ಈ ತರಬೇತಿ ಸಂಸ್ಥೆಯ ಮೂಲಕ ಸಹಕಾರ ಸಂಘ ಸಂಸ್ಥೆ/ಸಹಕಾರ ಇಲಾಖೆ/ಸಹಕಾರ ಲೆಕ್ಕಪರಿಶೋಧನಾ ಇಲಾಖೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಸಿಬ್ಬಂದಿಗಳಿಗೆ ಹಾಗೂ ಖಾಸಗಿ ಅಭ್ಯರ್ಥಿಗಳಿಗೆ 6 ತಿಂಗಳು/180 ದಿನಗಳ ಅವಧಿಯ ಡಿಪ್ಲೋಮಾ ಇನ್ ಕೋ-ಆಪರೇಟಿವ್ ಮ್ಯಾನೇಜ್‌ಮೆಂಟ್ ತರಬೇತಿಯನ್ನು ಜುಲೈ-2026 ರಿಂದ ಪ್ರಾರಂಭವಾಗುತ್ತಿದ್ದು. ಈ ತರಬೇತಿಯನ್ನು ಪಡೆಯಲಿಚ್ಚಿಸುವ ಅರ್ಹ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ತರಬೇತಿಯನ್ನು ಪಡೆಯಲಿಚ್ಚಿಸುವ ಅಭ್ಯರ್ಥಿಗಳು ಸಹಕಾರ ಸಂಘ, ಸಹಕಾರ ಇಲಾಖೆ/ಸಹಕಾರ ಲೆಕ್ಕಪರಿಶೋಧನಾ ಇಲಾಖೆಯಲ್ಲಿ ವೇತನ ಪಡೆಯುವ ನೌಕರರಾಗಿರಬೇಕು. ಖಾಸಗಿ ಅಭ್ಯರ್ಥಿಗಳಿಗೆ ನಿಯಮಿತವಾಗಿ ಅವಕಾಶವನ್ನು ಕಲ್ಪಿಸಲಾಗಿದೆ. ವಯೋಮಿತಿ 16 ವರ್ಷ ದಾಟಿದವರಾಗಿರಬೇಕು. ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಅಭ್ಯರ್ಥಿಗಳಿಗೆ ಶೇ.18 ರಷ್ಟು ಸ್ಥಾನಗಳನ್ನು ತರಬೇತಿಗಾಗಿ ಮೀಸಲಿರಿಸಲಾಗಿರುತ್ತದೆ. ಕನಿಷ್ಠ ವಿದ್ಯಾರ್ಹತೆ ಎಸ್.ಎಸ್.ಎಲ್.ಸಿ ಅಥವಾ ತತ್ಸಮಾನ ಪರಿಕ್ಷೇಯಲ್ಲಿ ಉತ್ತೀರ್ಣರಾಗಿರಬೇಕು. ಎಸ್.ಎಸ್.ಎಲ್.ಸಿ ಪರಿಕ್ಷೆಯಲ್ಲಿ ಅನುತ್ತೀರ್ಣರಾಗಿ, ಸಹಕಾರಿ ಸಂಘಗಳಲ್ಲಿ ಒಂದು ವರ್ಷಕ್ಕಿಂತ ಮೇಲ್ಪಟ್ಟು ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿಯೂ ಸಹ ತರಬೇತಿ ಪಡೆಯಲು ಅರ್ಹರಾಗಿರುತ್ತಾರೆ. ಇಂತಹ ಅಭ್ಯರ್ಥಿಗಳು ಮಾತ್ರ ತರಬೇತಿಗಾಗಿ ಅರ್ಜಿ ಸಲ್ಲಿಸಬಹುದು. ಈ ತರಬೇತಿಯಲ್ಲಿ ಅಭ್ಯರ್ಥಿಗಳಿಗೆ ಮಾಹೆಯಾನ 500 ರೂ.ಶಿಷ್ಯವೇತನವನ್ನು ನೀಡಲಾಗುವುದು.

ನಿರುದ್ಯೋಗಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಅಭ್ಯರ್ಥಿಗಳಿಗೆ 6 ತಿಂಗಳು/180 ದಿನಗಳ ವಿಶೇಷ ಡಿಪ್ಲೋಮಾ ಇನ್ ಕೋ-ಆಪರೇಟಿವ್ ಮ್ಯಾನೇಜ್ ಮೆಂಟ್ ತರಬೇತಿಯನ್ನು ಸಹ ನೀಡಲಾಗುವುದು.

ಈ ವರ್ಗಕ್ಕೆ ಸೇರಿದ ಅಭ್ಯರ್ಥಿಗಳ ಪಟ್ಟಿಯನ್ನು ಆಯಾ ಜಿಲ್ಲಾ ಸಹಕಾರ ಸಂಘಗಳ ಉಪನಿಬಂಧಕರವರ ಮೂಲಕ ಅಥವಾ ವ್ಯವಸ್ಥಾಪಕ ನಿರ್ದೇಶಕರು, ಜಿಲ್ಲಾ ಸಹಕಾರ ಕೇಂದ್ರ ಬ್ಯಾಂಕ್‌ಗಳ ಮೂಲಕ ಅರ್ಜಿಗಳನ್ನು ಸಲ್ಲಿಸಬಹುದು. ಅಭ್ಯರ್ಥಿಗಳು ಕನಿಷ್ಠ ಎಸ್.ಎಸ್.ಎಲ್.ಸಿ. ಅಥವಾ ತತ್ಸಮಾನ ಪರಿಕ್ಷೇಯಲ್ಲಿ ಉತ್ತೀರ್ಣರಾಗಿರಬೇಕು. ವಯೋಮಿತಿ 16 ವರ್ಷಗಳಾಗಿರಬೇಕು. ಗರಿಷ್ಠ 30 ವರ್ಷಗಳು ಮೀರಿರಬಾರದು. ಈ ಅಭ್ಯರ್ಥಿಗಳಿಗೆ ಮಾಹೆಯಾನ 600 ರೂ. ಶಿಷ್ಯವೇತನವನ್ನು ನೀಡಲಾಗುವುದು.

ಡಿ.ಸಿ.ಎಂ. ತರಬೇತಿಯ ಅರ್ಜಿ ಫಾರಂ ಮತ್ತು ವಿವರಣಾ ಪುಸ್ತಕವನ್ನು ಕಲಬುರಗಿ ತರಬೇತಿ ಸಂಸ್ಥೆಯಿಂದ ಹಾಗೂ ತರಬೇತಿ ಸಂಸ್ಥೆಯ ಕಾರ್ಯವ್ಯಾಪ್ತಿಯಲ್ಲಿ ಬರುವ ಜಿಲ್ಲಾ ಸಹಕಾರ ಯೂನಿಯನ್‌ಗಳಲ್ಲಿ (ಬೀದರ, ಕಲಬುರಗಿ, ಯಾದಗಿರಿ, ರಾಯಚೂರು. ಕೊಪ್ಪಳ ಮತ್ತು ಹೊಸಪೇಟ್) ಪಡೆಯಬಹುದು ತರಬೇತಿಯ ಅರ್ಜಿಯನ್ನು ಭರ್ತಿಮಾಡಿ 2026ರ ಜುಲೈ 15ರೊಳಗಾಗಿ ಕಲಬುರಗಿ ತರಬೇತಿ ಸಂಸ್ಥೆಯ ಪ್ರಾಂಶುಪಾಲರಿಗೆ ಸಲ್ಲಿಸಬಹುದಾಗಿದೆ.

ಆಸಕ್ತರು ಪ್ರಾಂಶುಪಾಲರು, ಕರ್ನಾಟಕ ಇನ್‌ಸ್ಟಿಟ್ಯೂಟ್ ಆಫ್ ಕೋ- ಆಪರೇಟಿವ್ ಮ್ಯಾನೇಜ್ ಮೆಂಟ್, ಆದರ್ಶನಗರ, ಪ್ರಗತಿ ಕಾಲೋನಿ, ಸೇಡಂ. ರಸ್ತೆ,-585 105ಗೆ ಅರ್ಜಿ ಸಲ್ಲಿಸಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ದೂರವಾರಣಿ ಸಂಖ್ಯೆ: 08472-245340/ 9916726886/ 9742307153/ 9113916753ಗೆ ಸಂಪರ್ಕ ಮಾಡಬಹುದಾಗಿದೆ ಎಂದು ಸಂಸ್ಥೆಯ ಪ್ರಾಂಶುಪಾಲರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಜುಲೈ 09ರಂದು ಮ್ಯಾರಥಾನ್, ಸೈಕ್ಲೋಥಾನ್ ಕಾರ್ಯಕ್ರಮ

**ರಾಯಚೂರು ಜುಲೈ** 08 : ರಾಯಚೂರು ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ರಾಯಚೂರು ಮಹಾನಗರ ಪಾಲಿಕೆ ವತಿಯಿಂದ ರಾಯಚೂರು ನಗರದ ಮತದಾರರ ಪಟ್ಟಿಯ ವಿಶೇಷ ತೀವ್ರ ಪರಿಷ್ಕರಣೆ□2026ರ ಹಾಗೂ ನಗರ ಸ್ವಚ್ಛತೆ ಮತ್ತು ಘನತ್ಯಾಜ್ಯ ನಿರ್ವಹಣೆಯ ಹೊಸ ನಿಯಮಗಳ ಕುರಿತು ಜಾಗೃತಿ ಮೂಡಿಸುವ ಉದ್ದೇಶದಿಂದ ಸದೃಢ ದೇಹ □ ಸ್ವಚ್ಛ ಸಮಾಜ □ ಬಲಿಷ್ಠ ಪ್ರಜಾಪ್ರಭುತ್ವಕ್ಕಾಗಿ ನಮ್ಮ ಓಟ ಹಾಗೂ ಸೈಕ್ಲೋಥಾನ್ ಕಾರ್ಯಕ್ರಮವನ್ನು ಜುಲೈ 09ರ ಬೆಳಿಗ್ಗೆ 07ಗಂಟೆಗೆ ನಗರದ ಜಿಲ್ಲಾ ಕ್ರೀಡಾಂಗಣದಲ್ಲಿ ಹಮ್ಮಿಕೊಳ್ಳಲಾಗಿದೆ.

ಕಾರ್ಯಕ್ರಮವು ಮಹಾತ್ಮ ಗಾಂಧಿ ಜಿಲ್ಲಾ ಕ್ರೀಡಾಂಗಣ ದಿಂದ ಆರಂಭವಾಗುವ ಈ ಮ್ಯಾರಥಾನ್□ಸೈಕ್ಲೋಥಾನ್ ಯು ಅಂಬೇಡ್ಕರ್ ವೃತ್ತ, ತೀನ್ಕಂದಿಲ್, ಮಹಾವೀರ ವೃತ್ತ, ಚಂದ್ರಮೌಳೇಶ್ವರ ವೃತ್ತ ಹಾಗೂ ಬಸವೇಶ್ವರ ವೃತ್ತ ಮಾರ್ಗವಾಗಿ ಸಂಚರಿಸಿ ಪುನಃ ಜಿಲ್ಲಾ ಕ್ರೀಡಾಂಗಣದಲ್ಲಿ ಸಮಾರೋಪಗೊಳ್ಳಲಿದೆ.

ಕಾರ್ಯಕ್ರಮದಲ್ಲಿ ಜಿಲ್ಲೆಯ ಜನಪ್ರತಿನಿಧಿಗಳು, ಜಿಲ್ಲಾಧಿಕಾರಿಗಳು, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು, ವಿವಿಧ ಇಲಾಖೆಗಳ ಹಿರಿಯ ಅಧಿಕಾರಿಗಳು, ಮಹಾನಗರ ಪಾಲಿಕೆಯ ಅಧಿಕಾರಿಗಳು, ಸಿಬ್ಬಂದಿ ಹಾಗೂ ಸಾರ್ವಜನಿಕರು ಭಾಗವಹಿಸಲಿದ್ದಾರೆ. ಈ ಕಾರ್ಯಕ್ರಮದ ಮೂಲಕ ಮತದಾರರ ಪಟ್ಟಿಯ ಪರಿಷ್ಕರಣೆಯಲ್ಲಿ ನಾಗರಿಕರ ಸಕ್ರಿಯ ಭಾಗವಹಿಸುವಿಕೆ, ನಗರ ಸ್ವಚ್ಛತೆ, ಮೂಲದಲ್ಲಿಯೇ ಕಸ ವಿಂಗಡಣೆ ಹಾಗೂ ಘನ ತ್ಯಾಜ್ಯ ನಿರ್ವಹಣೆಯ ಬಗ್ಗೆ ಜನ ಜಾಗೃತಿ ಮೂಡಿಸುವ ಉದ್ದೇಶ ಹೊಂದಲಾಗಿದೆ.

ನಗರದ ಯುವಕರು, ವಿದ್ಯಾರ್ಥಿಗಳು, ಮಹಿಳೆಯರು, ವಿವಿಧ ಸಂಘಸಂಸ್ಥೆಗಳು, ಸ್ವಯಂ ಸೇವಾ ಸಂಘಟನೆಗಳು, ಕ್ರೀಡಾಪಟುಗಳು, ಸೈಕ್ಲಿಂಗ್ ಆಸಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸುವಂತೆ ಕೋರಲಾಗಿದೆ.

ಕಾರ್ಯಕ್ರಮದಲ್ಲಿ ಭಾಗವಹಿಸಲು ಆಸಕ್ತರು link: https://docs.google.com/forms/d/e/1FAIpQLSe4VvhLgYXotDfx7BWOFfxGAQbfMVJKNyllrk2aEBcmDUB4hg/viewform?usp=publish-editor ಮೂಲಕ ನೋಂದಣಿಯಾಗಬಹುದಾಗಿದೆ ಎಂದು ರಾಯಚೂರು ಮಹಾನಗರ ಪಾಲಿಕೆಯ ಆಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ರಾಯಚೂರು ಜಿಲ್ಲೆಯಲ್ಲಿ ಜುಲೈ 10ರಂದು ಮಹಿಳಾ ಆಯೋಗದ ಅಧ್ಯಕ್ಷೆ ಡಾ.ನಾಗಲಕ್ಷ್ಮೀ ಚೌಧರಿ ಪ್ರವಾಸ

**ರಾಯಚೂರು ಜುಲೈ 08:** ಕರ್ನಾಟಕ ರಾಜ್ಯ ಮಹಿಳಾ ಆಯೋಗದ ಅಧ್ಯಕ್ಷೆ ಡಾ.ನಾಗಲಕ್ಷ್ಮೀ ಚೌಧರಿ ಅವರು ಜುಲೈ 10ರಂದು ರಾಯಚೂರು ಜಿಲ್ಲೆಯಲ್ಲಿ ಪ್ರವಾಸ ಕೈಗೊಂಡಿದ್ದಾರೆ.

ಜುಲೈ 09ರ ಸಂಜೆ 4.15ಕ್ಕೆ ಬೆಂಗಳೂರಿನಿಂದ ರೈಲ್ವೇ ಮೂಲಕ ನಿರ್ಗಮಿಸಿ, ರಾತ್ರಿ 11ಕ್ಕೆ ರಾಯಚೂರು ನಗರಕ್ಕೆ ಆಗಮಿಸಿ ವಾಸ್ತವ್ಯ ಹೂಡಲಿದ್ದಾರೆ.

ಜುಲೈ 10ರ ಬೆಳಿಗ್ಗೆ 10ಗಂಟೆಗೆ ರಾಯಚೂರಿನ ಪ್ರಥಮ ದರ್ಜೆ ಕಾಲೇಜಿನ ವಿದ್ಯಾರ್ಥಿಗಳೊಂದಿಗೆ ಸಂವಾದ ನಡೆಸಲಿದ್ದಾರೆ.

ಮಧ್ಯಾಹ್ನ 12ಕ್ಕೆ ರಾಯಚೂರಿನ ರಿಮ್ಸ್ ಆಸ್ಪತ್ರೆಗೆ ಭೇಟಿ ನೀಡಲಿದ್ದಾರೆ. ನಂತರ ಮಧ್ಯಾಹ್ನ 3.30ಕ್ಕೆ ರಾಯಚೂರು ಜಿಲ್ಲೆಯ ಲಿಂಗಸುಗೂರು ತಾಲೂಕಿನ ದೇವರಭೂಪುರ ಗ್ರಾಮದ ಶ್ರೀ ಅಮರೇಶ್ವರ ಕ್ಷೇತ್ರದಲ್ಲಿ ವೇದಾಂತ ಸಮ್ಮೇಳನದ ಮಾತೃ ನಮನ ಕಾರ್ಯಕ್ರಮದಲ್ಲಿ ಭಾಗಿಯಾಗುವರು.

ರಾತ್ರಿ 10.30ಕ್ಕೆ ಮರಳಿ ರಾಯಚೂರು ನಗರಕ್ಕೆ ಆಗಮಿಸಿ, 11.45ಕ್ಕೆ ರಾಯಚೂರಿನಿಂದ ರೈಲು ಮಾರ್ಗವಾಗಿ ಕೇಂದ್ರ ಸ್ಥಾನ ಬೆಂಗಳೂರಿಗೆ ಪ್ರಯಾಣ ಬೆಳೆಸುವರು ಎಂದು ಅಧ್ಯಕ್ಷರ ಆಪ್ತ ಕಾರ್ಯದರ್ಶಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಪದ್ಮಶ್ರೇಣಿ ಪ್ರಶಸ್ತಿಗೆ ಅರ್ಜಿ ಆಹ್ವಾನ

**ರಾಯಚೂರು ಜುಲೈ 08:** ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯಿಂದ 2026-27ನೇ ಸಾಲಿನಲ್ಲಿ ಸಮಾಜದ ಯಾವುದೇ ಕ್ಷೇತ್ರದಲ್ಲಿ ಅಂದರೆ ಕಲೆ, ಸಾಹಿತ್ಯ, ಶಿಕ್ಷಣ, ಕ್ರೀಡೆ, ವೈದ್ಯಕೀಯ, ಸಮಾಜ ಸೇವೆ, ವಿಜ್ಞಾನ, ಮತ್ತು ಇಂಜಿನಿಯರಿಂಗ್, ಸಾರ್ವಜನಿಕ ವ್ಯವಹಾರಗಳು ನಾಗರೀಕ ಸೇವೆ, ವ್ಯಾಪಾರ ಮತ್ತು ಕೈಗಾರಿಕೆ ಇತ್ಯಾದಿಗಳಲ್ಲಿ ಅತ್ಯುತ್ತಮ ಸೇವೆ ಸಲ್ಲಿಸಿರುವ ವ್ಯಕ್ತಿಗಳಿಂದ ಪದ್ಮಶ್ರೇಣಿಯ ಪ್ರಶಸ್ತಿಗಾಗಿ ಅರ್ಜಿ ಆಹ್ವಾನಿಸಲಾಗಿದೆ.

ರಾಯಚೂರು ಜಿಲ್ಲೆಯ ಆಸಕ್ತರು ತಮ್ಮ ಪ್ರಸ್ತಾವನೆಗಳನ್ನು ದಿನಾಂಕ : 14-07-2026 ರೊಳಗಾಗಿ ನಿಗದಿತ ನಮೂನೆಯಲ್ಲಿ ಭರ್ತಿ ಮಾಡಿ ಈ ಕಚೇರಿಗೆ ಸಲ್ಲಿಸುವುದು. ನಂತರ ಬರುವ ಯಾವುದೇ ಪ್ರಸ್ತಾವನೆ/ಮನವಿಗಳನ್ನು ಪರಿಗಣಿಸಲು ಸಾಧ್ಯವಿರುವುದಿಲ್ಲ. ನಿಗದಿತ ಅರ್ಜಿ ಹಾಗೂ ಹೆಚ್ಚಿನ ವಿವರಗಳಿಗಾಗಿ ಸಹಾಯಕ ನಿರ್ದೇಶಕರ ಕಚೇರಿ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಜಿಲ್ಲಾ ಕ್ರೀಡಾಂಗಣ ರಾಯಚೂರು ಇವರನ್ನು ಕಚೇರಿ ವೇಳೆಯಲ್ಲಿ ಸಂಪರ್ಕಿಸಬಹುದಾಗಿದೆ ಎಂದು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ರೈತರಿಂದ ಬೆಳೆ ಸಮೀಕ್ಷೆ ಮಾಡಲು ಆಗಸ್ಟ್ 31ಕೊನೆಯ ದಿನ

**ರಾಯಚೂರು ಜುಲೈ 08:** ರಾಯಚೂರು ಜಿಲ್ಲೆಯಲ್ಲಿ 2026-27ನೇ ಸಾಲಿನ ಮುಂಗಾರು ಹಂಗಾಮಿನ ಡಿಜಿಟಲ ಬೆಳೆ ಸಮೀಕ್ಷೆ ಕಾರ್ಯ ಜಿಲ್ಲೆಯಾದ್ಯಂತ ಆರಂಭವಾಗಿದ್ದು, ಈಗಾಗಲೇ ರೈತರ ಬೆಳೆ ಸಮೀಕ್ಷೆ ಆಪ್ ಬಿಡುಗಡೆಯಾಗಿದೆ. ಕಳೆದ ಬಾರಿಯಂತೆ ಈ ಬಾರಿಯೂ ಸಹ ಬೆಳೆ ಸಮೀಕ್ಷೆ ಕಾರ್ಯದಲ್ಲಿ ರೈತರು ಸ್ವತಃ ತಮ್ಮ ಜಮೀನಿನಲ್ಲಿ ತಾವು ಬೆಳೆದ ಬೆಳೆಯ ವಿವರವನ್ನು ದಾಖಲಿಸಲು ಹೊಸದಾಗಿ ಸರಳೀಕರಿಸಿದ ಬೆಳೆ ಸಮೀಕ್ಷೆ ಅಪ್ಲಿಕೇಷನ್ ನಲ್ಲಿ ಅವಕಾಶ ಕಲ್ಪಿಸಲಾಗಿದೆ.

ರಾಯಚೂರು ಜಿಲ್ಲೆಯ ರೈತರು ತಮ್ಮ ಜಮೀನಿನಲ್ಲಿ ಬೆಳೆದ ಬೆಳೆ ವಿವರ ದಾಖಲಿಸಲು ಮುಂಗಾರು ರೈತರ ಬೆಳೆ ಸಮೀಕ್ಷೆ 2026-27 ಎಂಬ ಹೆಸರಿನ ಮೊಬೈಲ್ ಆಪ್ ಅನ್ನು ಗೂಗಲ್ ಪ್ಲೇ-ಸ್ಟೋರ್‌ನಿಂದ ಅಥವಾ ಕಿಖ ಕೋಡ್ ಬಳಸಿ ಡೌನ್‌ಲೋಡ್ ಮಾಡಿಕೊಂಡು ತಾವು ಬೆಳೆದ ಬೆಳೆಯ ವಿವರವನ್ನು ಬರುವ ಆಗಸ್ಟ್ 31ರೊಳಗೆ ದಾಖಲಿಸಬೇಕು.

ಹೊಸ ರೈತರ ಬೆಳೆ ಸಮೀಕ್ಷೆ ಅಪ್ಲಿಕೇಷನ್ ಫ್ರೂಟ್ಸ್ ತಂತ್ರಾಂಶದ ಎಫ್‌ಐಡಿ ಸಂಖ್ಯೆಗೆ ಜೋಡಣೆಯಾಗಿರುವುದರಿಂದ ಅಪ್ಲಿಕೇಷನ್ ಬಳಸಲು ರೈತರು ಫ್ರೂಟ್ಸ್ ತಂತ್ರಾಂಶದ ಎಫ್‌ಐಡಿ ಸಂಖ್ಯೆ ಹೊಂದಿರುವುದು ಕಡ್ಡಾಯವಾಗಿರುತ್ತದೆ. ಒಂದು ವೇಳೆ ರೈತರು ಎಫ್‌ಐಡಿ ಸಂಖ್ಯೆ ಹೊಂದಿಲ್ಲದಿದ್ದಲ್ಲಿ ರೈತ ಸಂಪರ್ಕ ಕೇಂದ್ರ, ಗ್ರಾಮ ಒನ್ ಕೇಂದ್ರ, ತೋಟಗಾರಿಕೆ ಇಲಾಖೆ ಅಥವಾ ಕಂದಾಯ ಇಲಾಖೆಯನ್ನು ಸಂಪರ್ಕಿಸಿ ಎಫ್‌ಐಡಿ ಸಂಖ್ಯೆ ಮಾಡಿಸಿಕೊಳ್ಳಬಹುದು.

ಸರ್ಕಾರದ ಯೋಜನೆಗಳಿಗೆ ಬಳಕೆ: ಎನ್.ಡಿ.ಆರ್.ಎಫ್/ ಎಸ್.ಡಿ.ಆರ್.ಎಫ್. ಅಡಿಯಲ್ಲಿ ಪ್ರವಾಹ ಮತ್ತು ಬರಗಾಲ ಸಂದರ್ಭದಲ್ಲಿ ನೀಡುವ ನಷ್ಟ ಪರಿಹಾರ ವಿತರಿಸಲು. ಕನಿಷ್ಠ ಬೆಂಬಲ ಬೆಲೆ ಯೋಜನೆಯಡಿ ಅರ್ಹ ಫಲಾನುಭವಿಗಳನ್ನು ಗುರುತಿಸಲು. ಬೆಳೆ ವಿಮಾ ಯೋಜನೆಯಡಿ ಬೆಳೆ ವಿವರ ಪರಿಶೀಲಿಸಲು. ಸಾಂಖ್ಯಿಕ ಇಲಾಖೆ, ಕೃಷಿ, ತೋಟಗಾರಿಕೆ ಮತ್ತು ರೇಷ್ಮೆ ಇಲಾಖೆಗಳ ಬೆಳೆ ವಿಸ್ತೀರ್ಣ ವರದಿ ಕಾರ್ಯದಲ್ಲಿ. ಬೆಳೆ ಕಟಾವು ಪ್ರಯೋಗಗಳನ್ನು ಕೈಗೊಳ್ಳಲು. ಬೆಳೆ ಮಾನದಂಡಗಳಿಗೆ ಅನುಗುಣವಾಗಿ ಕೃಷಿ/ ತೋಟಗಾರಿಕೆ/ರೇಷ್ಮೆ ಇಲಾಖೆಗಳ ಫಲಾನುಭವಿ ಆಧಾರಿತ ಯೋಜನೆಗಳ ಅನುಷ್ಠಾನಕ್ಕೆ. ಪಹಣಿಯಲ್ಲಿ ಬೆಳೆ ವಿವರ ದಾಖಲಿಸಲು ಬಳಕೆ ಮಾಡಿಕೊಳ್ಳಲಾಗುತ್ತದೆ. ಜಿಲ್ಲೆಯ ರೈತರು ಈ ಅವಕಾಶದ ಸದುಪಯೋಗ ಪಡೆದುಕೊಂಡು ತಮ್ಮ ಜಮೀನಿನಲ್ಲಿ ಬೆಳೆದ ಬೆಳೆ ವಿವರವನ್ನು ತಾವೇ ಸರ್ಕಾರಕ್ಕೆ ನಿಗದಿತ ಸಮಯದೊಳಗೆ ವರದಿ ಮಾಡುವಂತೆ ಕೋರಲಾಗಿದೆ.

ಹೆಚ್ಚಿನ ಮಾಹಿತಿಗಾಗಿ ಬೆಳೆ ಸಮೀಕ್ಷೆ ಸಹಾಯವಾಣಿ ಸಂಖ್ಯೆ: 1800 425 3553ಕ್ಕೆ ಕರೆ ಮಾಡಿ ಅಥವಾ ತಾಲ್ಲೂಕು ಸಹಾಯಕ ಕೃಷಿ ನಿರ್ದೇಶಕರು, ರೈತ ಸಂಪರ್ಕ, ತೋಟಗಾರಿಕೆ ಮತ್ತು ಕಂದಾಯ ಇಲಾಖೆ ಅಧಿಕಾರಿಗಳನ್ನು ಸಂಪರ್ಕ ಮಾಡಬಹುದಾಗಿದೆ ಎಂದು ಕೃಷಿ ಇಲಾಖೆಯ ಜಂಟಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಬೆಳೆ ವಿಮೆ ಮಾಡಿಸಿ ಪರಿಹಾರದ ಸೌಲಭ್ಯ ಪಡೆಯಿರಿ



**ಯಾದಗಿರಿ:ಜು.8:** ಜಿಲ್ಲೆಯಲ್ಲಿ ಈ ಬಾರಿ ಮಳೆಯ ಅಭಾವ ತೀವ್ರವಾಗಿರುವ ಹಿನ್ನೆಲೆಯಲ್ಲಿ ರೈತರು ರಾಜ್ಯ ಸರ್ಕಾರದ ಬೆಳೆ ಯೋಜನೆಗಳ ಜೊತೆಗೆ ಕೇಂದ್ರ ಸರ್ಕಾರದ ಪ್ರಧಾನ ಮಂತ್ರಿ ಫಸಲ್ ಬೀಮಾ ಯೋಜನೆ ಅಡಿ ಕಡ್ಡಾಯವಾಗಿ ಬೆಳೆ ವಿಮೆ ಮಾಡಿಸಿಕೊಳ್ಳಬೇಕು ಎಂದು ಬಿಜೆಪಿ ಮಾಜಿ ಜಿಲ್ಲಾಧ್ಯಕ್ಷ ಚಂದ್ರಶೇಖರಗೌಡ ಮಾಗನೂರ ರೈತರಿಗೆ ಸಲಹೆ ನೀಡಿದ್ದಾರೆ.

ಈ ಕುರಿತು ಪ್ರಕಟಣೆ ನೀಡಿರುವ ಅವರು, ಜಿಲ್ಲೆಯಲ್ಲಿ ಬರದಂತಹ ಪರಿಸ್ಥಿತಿ ನಿರ್ಮಾಣವಾಗಿರುವುದರಿಂದ ರೈತರು ಬೆಳೆ ನಷ್ಟದ ಸಂದರ್ಭದಲ್ಲಿ ಪರಿಹಾರದಿಂದ ವಂಚಿತರಾಗದಂತೆ ಮುಂಜಾಗ್ರತಾ ಕ್ರಮವಾಗಿ ಬೆಳೆ ವಿಮೆ ಮಾಡಿಸಿಕೊಳ್ಳುವುದು ಅತ್ಯಂತ ಅಗತ್ಯವಾಗಿದೆ ಎಂದು ಹೇಳಿದರು.

ಬೆಳೆ ವಿಮೆ ಸಂಬಂಧ ಕೃಷಿ ಇಲಾಖೆಯಿಂದ ಸಂಪೂರ್ಣ ಮಾಹಿತಿ ಪಡೆದು, ಗ್ರಾಮ ಮಟ್ಟದ ಅಧಿಕಾರಿಗಳು, ನಾಡ ಕಚೇರಿ, ಜಂಟಿ ಕೃಷಿ ನಿರ್ದೇಶಕರ ಕಚೇರಿ, ಸಹಾಯಕ ಕೃಷಿ ನಿರ್ದೇಶಕರ ಕಚೇರಿ ಹಾಗೂ ಹೋಬಳಿ ಮಟ್ಟದ ಕೃಷಿ ಅಧಿಕಾರಿಗಳ (ಎಒ) ಮಾರ್ಗದರ್ಶನದಲ್ಲಿ ಪ್ರತಿ ಹೆಕ್ಟೇರ್‌ಗೆ ನಿಗದಿಪಡಿಸಿರುವ ವಿಮೆಯನ್ನು ಸಕಾಲದಲ್ಲಿ ಮಾಡಿಸಿಕೊಳ್ಳಬೇಕು ಎಂದು ಅವರು ಮನವಿ ಮಾಡಿದರು.

ಮುಂಗಾರು ಮಳೆ ಕೈಕೊಟ್ಟಿರುವ ಹಿನ್ನೆಲೆಯಲ್ಲಿ ರೈತರು ರಾಜ್ಯ ಸರ್ಕಾರದ ಯೋಜನೆಗಳ ಜೊತೆಗೆ ಪ್ರಧಾನ ಮಂತ್ರಿ ಫಸಲ್ ಬೀಮಾ ಯೋಜನೆಯ ಸೌಲಭ್ಯವನ್ನು ಬಳಸಿಕೊಂಡು ಬೆಳೆ ನಷ್ಟಕ್ಕೆ ಪರಿಹಾರ ಪಡೆಯಬೇಕು ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ರೈತರು ಉಳುಮೆ ಮಾಡಬಾರದು ಎಂಬ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರ ಹೇಳಿಕೆಯನ್ನು ಟೀಕಿಸಿದ ಮಾಗನೂರ, ರಾಜ್ಯದ ಶೇ.70ಕ್ಕೂ ಹೆಚ್ಚು ಜನರು ಕೃಷಿಯನ್ನೇ ಅವಲಂಬಿಸಿ ಜೀವನ ನಡೆಸುತ್ತಿದ್ದಾರೆ. ಇಂತಹ ಸಂದರ್ಭದಲ್ಲಿ ರೈತರು ಬಿತ್ತನೆ ಮಾಡದಿದ್ದರೆ ಅವರ ಜೀವನ ನಿರ್ವಹಣೆ ಹೇಗೆ ಸಾಧ್ಯ ಎಂಬ ಪ್ರಶ್ನೆ ಉದ್ಭವಿಸುತ್ತದೆ. ಸರ್ಕಾರ ಬಿತ್ತನೆ ಮಾಡದಂತೆ ಸಲಹೆ ನೀಡುವುದಾದರೆ, ಪ್ರತಿ ಎಕರೆಗೆ 50 ಸಾವಿರ ಪರಿಹಾರ ಘೋಷಿಸಿ ರೈತರ ನೆರವಿಗೆ ಬರಬೇಕು ಎಂದು ಆಗ್ರಹಿಸಿದರು.

ರಾಜ್ಯದಲ್ಲಿ ಇನ್ನೂ ಕೃಷಿ ಸಚಿವರ ನೇಮಕವಾಗದಿರುವುದು ಆತಂಕಕಾರಿ ಬೆಳವಣಿಗೆಯಾಗಿದೆ. ಕಲ್ಯಾಣ ಕರ್ನಾಟಕ ಭಾಗದ ರೈತರ ಸಂಕಷ್ಟದ ಬಗ್ಗೆ ಸರ್ಕಾರಕ್ಕೆ ನಿಜವಾದ ಕಾಳಜಿ ಇದ್ದರೆ ತಕ್ಷಣವೇ ಕೃಷಿ ಸಚಿವರನ್ನು ನೇಮಿಸಿ ರೈತರ ಸಮಸ್ಯೆಗಳತ್ತ ಗಮನ ಹರಿಸಬೇಕು ಎಂದು ಒತ್ತಾಯಿಸಿದರು.

ಕಲ್ಯಾಣ ಕರ್ನಾಟಕ ಭಾಗದಲ್ಲಿ ಕಾಂಗ್ರೆಸ್ ಪಕ್ಷದ ಬಹುಪಾಲು ಶಾಸಕರಿದ್ದರೂ ರೈತರ ಸಮಸ್ಯೆಗಳು ಸರ್ಕಾರದ ಗಮನಕ್ಕೆ ಬರುತ್ತಿಲ್ಲ ಎಂದು ಅವರು ಆರೋಪಿಸಿದರು.

ಅನ್ನಭಾಗ್ಯ ಯೋಜನೆಯಡಿ ನೀಡಬೇಕಾದ 5 ಕೆಜಿ ಅಕ್ಕಿಯನ್ನು ರಾಜ್ಯ ಸರ್ಕಾರ ಸಮರ್ಪಕವಾಗಿ ವಿತರಿಸುತ್ತಿಲ್ಲ ಎಂದು ಆರೋಪಿಸಿದ ಅವರು, ಕೇಂದ್ರ ಸರ್ಕಾರದಿಂದ ಆಹಾರ ಧಾನ್ಯಗಳ ಪೂರೈಕೆ ನಡೆಯುತ್ತಿದೆ ಎಂದು ಹೇಳಿದರು.

ಸುರಪುರ ತಾಲೂಕಿನ ನಾರಾಯಣಪುರ ಬಸವಸಾಗರ ಜಲಾಶಯದ ವ್ಯಾಪ್ತಿಯಲ್ಲಿ ಸುಮಾರು ನಾಲ್ಕು ಲಕ್ಷ ಹೆಕ್ಟೇರ್ ನೀರಾವರಿ ಪ್ರದೇಶವಿದ್ದರೂ, ಜಲಾಶಯಕ್ಕೆ ನೀರಿನ ಒಳಹರಿವು ಸಂಪೂರ್ಣ ಸ್ಥಗಿತಗೊಂಡಿದೆ.

ಪ್ರಸ್ತುತ ಕುಡಿಯುವ ನೀರಿಗಾಗಿ ಮಾತ್ರ ನೀರನ್ನು ಕಾಯ್ದಿರಿಸಲಾಗಿದ್ದು, ಈಗಾಗಲೇ ಶೇ.95ರಷ್ಟು ರೈತರು ಅಲ್ಪ ಪ್ರಮಾಣದ ಮಳೆಯನ್ನು ನಂಬಿ ಬಿತ್ತನೆ ನಡೆಸಿದ್ದಾರೆ.

ಇಂತಹ ಗಂಭೀರ ಪರಿಸ್ಥಿತಿಯನ್ನು ಮುಖ್ಯಮಂತ್ರಿ ಖುದ್ದಾಗಿ ಪರಿಶೀಲಿಸಿ, ಕಲ್ಯಾಣ ಕರ್ನಾಟಕ ಭಾಗದಲ್ಲಿ ರೈತರೊಂದಿಗೆ ವಿಶೇಷ ಸಭೆ ನಡೆಸಿ ಅವರ ಅಹವಾಲು ಆಲಿಸಬೇಕು ಎಂದು ಒತ್ತಾಯಿಸಿದರು.

ರಾಜ್ಯ ಸರ್ಕಾರ ತಕ್ಷಣವೇ ಬೆಳೆ ಹಾನಿಗೊಳಗಾದ ರೈತರಿಗೆ ವಿವಿಧ ಬೆಳೆಗಳಿಗೆ ಪ್ರತಿ ಎಕರೆಗೆ 50 ಸಾವಿರ ಪರಿಹಾರ ಘೋಷಿಸಿ ಬಿಡುಗಡೆ ಮಾಡಬೇಕು ಎಂದು ಚಂದ್ರಶೇಖರಗೌಡ ಮಾಗನೂರ ಆಗ್ರಹಿಸಿದರು.

# ಕಲ್ಯಾಣ ಕರ್ನಾಟಕ ಭಾಗದ ಸರ್ವಾಂಗೀಣ ಅಭಿವೃದ್ಧಿಗೆ ಕೆಕೆಸಿಸಿಐ ಮನವಿ



**ಕಲಬುರಗಿ,ಜು.8**–ಕಲ್ಯಾಣ ಕರ್ನಾಟಕ ವಾಣಿಜ್ಯ ಮತ್ತು ಕೈಗಾರಿಕಾ ಸಂಸ್ಥೆ (ಕೆಕೆಸಿಸಿಐ) ವತಿಯಿಂದ ಅಧ್ಯಕ್ಷ ಶರಣಬಸಪ್ಪ ಎಂ.ಪಪ್ಪಾ ಹಾಗೂ ಗೌರವ ಕಾರ್ಯದರ್ಶಿ ಶಿವರಾಜ್ ವಿ.ಇಂಗಿನಶೆಟ್ಟಿ ಅವರ ನೇತೃತ್ವದ ನಿಯೋಗವು ಕಲಬುರಗಿ ಪ್ರವಾಸದಲ್ಲಿದ್ದ ರಾಜ್ಯದ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರನ್ನು ಭೇಟಿ ಮಾಡಿ, ಕಲ್ಯಾಣ ಕರ್ನಾಟಕ ಭಾಗದ ಸರ್ವಾಂಗೀಣ ಅಭಿವೃದ್ಧಿಗಾಗಿ ಸಮಗ್ರ ಮನವಿಪತ್ರವನ್ನು ಸಲ್ಲಿಸಿತು.

ಕಲ್ಯಾಣ ಕರ್ನಾಟಕವು ಸಂವಿಧಾನದ 371(ಜೆ) ಅಡಿಯಲ್ಲಿ ವಿಶೇಷ ಸ್ಥಾನಮಾನ ಹೊಂದಿದ್ದರೂ, ಇನ್ನೂ ಕೈಗಾರಿಕೆ, ಮೂಲಸೌಕರ್ಯ ಹಾಗೂ ಉದ್ಯೋಗ ಸೃಷ್ಟಿ ಕ್ಷೇತ್ರಗಳಲ್ಲಿ ಹೆಚ್ಚಿನ ಸರ್ಕಾರಿ ಗಮನ

ಮತ್ತು ಹೂಡಿಕೆಯ ಅಗತ್ಯವಿದೆ ಎಂದು ತಿಳಿಸಿ, ಈ ಭಾಗವನ್ನು ಕರ್ನಾಟಕದ ಮುಂದಿನ ಕೈಗಾರಿಕಾ ಹಾಗೂ ಹೂಡಿಕೆ ಕೇಂದ್ರವನ್ನಾಗಿ ರೂಪಿಸುವಂತೆ ಮುಖ್ಯಮಂತ್ರಿಗಳಿಗೆ ಕೆಕೆಸಿಸಿಐ ಮನವಿ ಮಾಡಿತು.

ಕಲ್ಯಾಣ ಕರ್ನಾಟಕ ಗ್ರೋತ್ ಮಿಷನ್ ಆರಂಭಿಸಿ ಬೃಹತ್ ಕೈಗಾರಿಕೆಗಳು ಹಾಗೂ ಹೂಡಿಕೆಗಳನ್ನು ಆಕರ್ಷಿಸುವುದು, ಪಿಎಂ ಮಿತ್ರ ಮೆಗಾ ಟೆಕ್ಸ್ಟೈಲ್ ಪಾರ್ಕ್ ಕಾಮಗಾರಿಯನ್ನು ತ್ವರಿತಗೊಳಿಸುವುದು,

ಕಲಬುರಗಿ ಎರಡನೇ ವರ್ತುಲ ರಸ್ತೆ (ಸೆಕೆಂಡ್ ಔಟರ್ ರಿಂಗ್ ರಸ್ತೆ) ನಿರ್ಮಾಣ, ಕಲಬುರಗಿಯಲ್ಲಿ ಕಲ್ಯಾಣ ಕರ್ನಾಟಕದ ಶಾಶ್ವತ ವಿಶೇಷ ಕಾರ್ಯಾಲಯ ಸ್ಥಾಪನೆ, ಗೋವಿಂದರಾವ್ ಸಮಿತಿ ಶಿಫಾರಸುಗಳ ಶೀಘ್ರ ಜಾರಿ ಹಾಗೂ 'ಬಿಯಾಂಡ್ ಬೆಂಗಳೂರು' ಯೋಜನೆಯಡಿ ಕಲ್ಯಾಣ ಕರ್ನಾಟಕಕ್ಕೆ ಅತ್ಯುನ್ನತ ಆದ್ಯತೆ ನೀಡುವಂತೆ ಒತ್ತಾಯಿಸಲಾಯಿತು.

ಇದರ ಜೊತೆಗೆ, ಹೊಸ ಕರ್ನಾಟಕ ಎಂಎಸ್‌ಎಂಇ ನೀತಿಯಲ್ಲಿ ಕಲ್ಯಾಣ ಕರ್ನಾಟಕಕ್ಕೆ ವಿಶೇಷ ಪ್ಯಾಕೇಜ್ ಘೋಷಿಸುವುದು, ವಿಶೇಷ ಆರ್ಥಿಕ ವಲಯಗಳು (ಖಇಚ) ಸ್ಥಾಪಿಸುವುದು, ಕಲಬುರಗಿಯಲ್ಲಿ ನೂತನ ಎಪಿಎಂಸಿ ಮಾರುಕಟ್ಟೆ ನಿರ್ಮಿಸುವುದು, ಕಲಬುರಗಿ ರೈಲ್ವೆ ವಿಭಾಗ ಸೇರಿದಂತೆ ರೈಲ್ವೆ ಮೂಲಸೌಕರ್ಯ ಅಭಿವೃದ್ಧಿ, ಕಲಬುರಗಿ ವಿಮಾನ ನಿಲ್ದಾಣದ ವಾಯು ಸಂಪರ್ಕ ಹಾಗೂ ಮೂಲಸೌಕರ್ಯ ವಿಸ್ತರಣೆ, ಕಡೇಚೂರು ಫಾರ್ಮಾ ಹಬ್ ಅಭಿವೃದ್ಧಿ, ಐಟಿ, ಜಿಸಿಸಿ, ಎಐ ಹಾಗೂ ಡಿಜಿಟಲ್ ಆರ್ಥಿಕತೆಯ ಬೆಳವಣಿಗೆಗೆ ವಿಶೇಷ ಉತ್ತೇಜನ ನೀಡುವಂತೆ ಮನವಿ ಮಾಡಲಾಯಿತು.

ಅದೇ ರೀತಿ, ಕಲ್ಯಾಣ ಕರ್ನಾಟಕ ಸಮಗ್ರ ಪ್ರವಾಸೋದ್ಯಮ ವಲಯ ಅಭಿವೃದ್ಧಿ, ಕಲಬುರಗಿಯಲ್ಲಿ ಹೊಸ ಅಗ್ನಿಶಾಮಕ ಕೇಂದ್ರಗಳ ಸ್ಥಾಪನೆ, ನಗರದ ಪ್ರವೇಶ ಮತ್ತು ನಿರ್ಗಮನ ಭಾಗಗಳಲ್ಲಿ ಉಪಗ್ರಹ ಬಸ್ ನಿಲ್ದಾಣಗಳ ನಿರ್ಮಾಣ ಹಾಗೂ ಅಪ್ಪರ್ ಕೃಷ್ಣಾ ಯೋಜನೆಯನ್ನು ಕಲಬುರಗಿವರೆಗೆ ವಿಸ್ತರಿಸಿ ಶೀಘ್ರ ಪೂರ್ಣಗೊಳಿಸುವಂತೆ ಸರ್ಕಾರವನ್ನು ಕೆಕೆಸಿಸಿಐ ಒತ್ತಾಯಿಸಿತು.

ಈ ಎಲ್ಲ ಯೋಜನೆಗಳನ್ನು ಆದ್ಯತೆಯ ಮೇರೆಗೆ ಜಾರಿಗೊಳಿಸಿದರೆ ಕಲ್ಯಾಣ ಕರ್ನಾಟಕದಲ್ಲಿ ಕೈಗಾರಿಕಾ ಬೆಳವಣಿಗೆ ವೇಗ ಪಡೆದು, ಹೆಚ್ಚಿನ ಹೂಡಿಕೆಗಳು, ಉದ್ಯೋಗಾವಕಾಶಗಳು, ಉತ್ತಮ ಮೂಲಸೌಕರ್ಯ ಹಾಗೂ ಸಮತೋಲನ ಪ್ರಾದೇಶಿಕ ಅಭಿವೃದ್ಧಿಗೆ ಹೊಸ ದಿಕ್ಕು ದೊರೆಯಲಿದೆ ಎಂದು ಕೆಕೆಸಿಸಿಐ ವಿಶ್ವಾಸ ವ್ಯಕ್ತಪಡಿಸಿತು.

ಮುಖ್ಯಮಂತ್ರಿಗಳು ಮನವಿಪತ್ರವನ್ನು ಸ್ವೀಕರಿಸಿ, ಅದರಲ್ಲಿ ಪ್ರಸ್ತಾಪಿಸಲಾದ ವಿಷಯಗಳನ್ನು ಸಕಾರಾತ್ಮಕವಾಗಿ ಪರಿಗಣಿಸುವ ಭರವಸೆ ನೀಡಿದರು ಎಂದು ಕೆಕೆಸಿಸಿಐ ತಿಳಿಸಿದೆ.

# ಕಲಬುರಗಿ ಬರಪೀಡಿತ ಜಿಲ್ಲೆ ಘೋಷಣೆಗೆ ಒತ್ತಾಯ



**ಕಲಬುರಗಿ,ಜು.8**–ಮಳೆ ಬಾರದ ಕಾರಣ ಬರ ಪರಿಸ್ಥಿತಿ ಎದುರಿಸುತ್ತಿರುವ ಕಲ್ಯಾಣ ಕರ್ನಾಟಕ ಭಾಗದ ಕೇಂದ್ರ ಜಿಲ್ಲೆಯಾದ ಕಲಬುರಗಿ ಜಿಲ್ಲೆಯನ್ನು ಬರಪೀಡಿತ ಜಿಲ್ಲೆಯ ಎಂದು ಘೋಷಿಸಬೇಕು ಎಂದು ಕರ್ನಾಟಕ ಯುವಶಕ್ತಿ ವೇದಿಕೆ ಅಧ್ಯಕ್ಷ ಮಾರುತಿ ಎಂ ಕಮ್ಮರವರು ಒತ್ತಾಯಿಸಿದ್ದಾರೆ.

ಮುಂಗಾರು ಮಳೆ ಸಂಪೂರ್ಣ ವಿಫಲವಾಗಿದೆ. ಈ ಕಾರಣದಿಂದ ತೊಗರಿ, ಹೆಸರು, ಉದ್ದು ಬಿತ್ತನೆಗೆ ಹಾಕಿದ ಬೀಜ, ಗೊಬ್ಬರಕ್ಕೆ ಹಾಕಿದ ಹಣ ನಷ್ಟವಾಗಿದೆ. ಎಳ್ಳು ಸೋಯಾಬಿನ್ ಇನ್ನಿತರ ಬೆಳೆಗಳು ಮಳೆ ಕಾರಣಗಳಿಂದ ಸಂಪೂರ್ಣ ಬೆಳೆದಿರುವುದಿಲ್ಲ. ಬೆಳೆ ಮೊಳಕೆಯಲ್ಲೇ ಒಣಗಿ ಹೋಗಿದ್ದು, ಇಳುವರಿ ಶೂನ್ಯ ಅಥವಾ ತೀರಾ ಕಡಿಮೆಯಾಗಿದೆ. ಜಾನುವಾರುಗಳಿಗೆ ಮೇವಿನ ಕೊರತೆಯುಂಟಾಗಿದೆ.

ಕುಡಿಯುವ ನೀರಿನ ಸಮಸ್ಯೆ ಎದುರಾಗಿದ್ದು, ಅಂತರ್ಜಲ ಮಟ್ಟ ಕುಸಿದು ಕೊಳವೆಬಾವಿಗಳು ಬತ್ತಿಹೋಗುತಿವೆ. ಬ್ಯಾಂಕ್, ಸಹಕಾರ ಸಂಘ, ಖಾಸಗಿ ಸಾಲ ತೀರಿಸಲು ಆಗದೇ ಬಡ್ಡಿ ಹೆಚ್ಚಾಗುತ್ತಾ ಹೋಗುತ್ತದೆ. ಕೆಲಸವಿಲ್ಲದೆ ಕುಟುಂಬ ಸಮೇತ ನಗರಗಳಿಗೆ ಕಾರ್ಮಿಕರು ವಲಸೆ ಹೋಗುತ್ತಿದ್ದಾರೆ.

ಸರ್ಕಾರ ಬರ ಪರಿಹಾರ, ಮೇವು ಶಿಬಿರ, ಕುಡಿಯುವ ನೀರು ಯೋಜನೆ, ಬೆಳೆ ವಿಮೆ ಮೂಲಕ ನೆರವು ನೀಡಲು ಪ್ರಯತ್ನಿಸಬೇಕು. ರೈತರು ಬ್ಯಾಂಕುಗಳಲ್ಲಿ ಅಥವಾ ಸಹಕಾರ ಸಂಘಗಳಲ್ಲಿ ಪಡೆದಿರುವ ಕೃಷಿ ಸಾಲವನ್ನು ಸಂಪೂರ್ಣವಾಗಿ ಮನ್ನಾ ಮಾಡಬೇಕೆಂದು ಕಮ್ಮಾರ ಒತ್ತಾಯಿಸಿದ್ದಾರೆ.

# ದ್ವೇಷ ತೊರೆದು ಸಕಾರಾತ್ಮಕ ಜೀವನ ಸಾಗಿಸಲು ಕ್ಷಮಾಗುಣ ಅಗತ್ಯ

**ಕಲಬುರಗಿ:ಜು.8:** ದ್ವೇಷದಿಂದ ಏನು ಸಾಧನೆ ಸಾಧ್ಯವಿಲ್ಲ. ಜನರಲ್ಲಿ ಸಹಾನೂಭೂತಿಯನ್ನು ಬೆಳೆಸಲು ಮತ್ತು ದ್ವೇಷವನ್ನು ತೊರೆದು ಸಕಾರಾತ್ಮಕ ಜೀವನವನ್ನು ಸಾಗಿಸಲು ಕ್ಷಮಾಗುಣ ಅಗತ್ಯವಾಗಿದೆ. ಯಾರಾದರೂ ನಮ್ಮನ್ನು ಮಾನಸಿಕವಾಗಿ ನೋಯಿಸಿದರೆ, ಈ ಆಘಾತದಿಂದ ಚೇತರಿಸಿಕೊಳ್ಳಲು ಸುಲಭವಾದ ಮಾರ್ಗವೆಂದರೆ ಅವರನ್ನು ಕ್ಷಮಿಸುವುದು. ಕ್ಷಮೆಯು ಜೀವನದಲ್ಲಿ ಧನಾತ್ಮಕತೆಯನ್ನು ತರುತ್ತದೆ ಮತ್ತು ಮನಸ್ಸನ್ನು ಹಗುರವನ್ನಾಗಿಸುತ್ತದೆ. ಇದು ಪ್ರಾಯೋಗಿಕವಾಗಿ ಸುಲಭವಲ್ಲದಿದ್ದರು ಕೂಡಾ ಅನಿವಾರ್ಯವಾಗಿದೆ ಎಂದು ಉಪನ್ಯಾಸಕ, ಚಿಂತಕ ಎಚ್.ಬಿ.ಪಾಟೀಲ್ ಅಭಿಮತಪಟ್ಟರು.

ನಗರದ ಆಳಂದ ರಸ್ತೆಯ ಸಂತೋಷ ಕಾಲನಿ ಕ್ರಾಸ್ ಸಮೀಪವಿರುವ 'ರಿಪಬ್ಲಿಕ್ ಸ್ಪೋಕನ ಇಂಗ್ಲೀಷ್ ಅಕಾಡೆಮಿ'ಯಲ್ಲಿ 'ಬಸವೇಶ್ವರ ಸಮಾಜ ಸೇವಾ ಬಳಗ'ದ ವತಿಯಿಂದ ಸೋಮವಾರ ಜರುಗಿದ 'ಜಾಗತಿಕ ಕ್ಷಮೆ ದಿನಾಚರಣೆ'ಯಲ್ಲಿ ಅವರು ಮಾತನಾಡುತ್ತಿದ್ದರು.

ಕ್ಷಮಾಗುಣದಿಂದ ಜೀವನದಲ್ಲಿ ಒಳ್ಳೆಯ ಬದಲಾವಣೆಯನ್ನು ತರುತ್ತದೆ. ಹೀಗೆ ಜನರಲ್ಲಿ ಸದ್ಭಾವನೆ ಹಾಗೂ ಕ್ಷಮೆಯ ಮನಸ್ಥಿತಿಯನ್ನು ಬೆಳೆಸಲೆಂದೇ ಪ್ರತಿವರ್ಷ 'ಜುಲೈ-7'ರಂದು 'ಜಾಗತಿಕ ಕ್ಷಮೆ ದಿನ'ವನ್ನು ಆಚರಿಸಲಾಗುತ್ತದೆ. ಈ ದಿನವು ಒಬ್ಬರಿಗೆ ಬದಲಾಗಲು, ಒಂದು ಅವಕಾಶ ನೀಡುವುದು, ಜನರನ್ನು ಕ್ಷಮಿಸುವುದು ಮತ್ತು ದ್ವೇಷವನ್ನು ಮರೆತು ಆರೋಗ್ಯಕರ ಸಂಬಂಧವನ್ನು ಬಲಪಡಿಸುವುದು ಅತ್ಯಗತ್ಯ ಎಂಬುದನ್ನು ನೆನಪಿಸುತ್ತದೆ. ಇದನ್ನು 1994ರಲ್ಲಿ ಕೆನಡಾದ 'ಕ್ರಿಶ್ಚಿಯನ್ ಎಂಬಸಿ



ಆಫ್ ಕ್ರೈಸ್ಟ್ ಅಂಬಾಸಿಡರ್ಸ್' ಎಂಬ ಸಂಸ್ಥೆಯು ಪ್ರಾರಂಭಿಸಿತು ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಸಂಸ್ಥೆಯ ಅಧ್ಯಕ್ಷ ದತ್ತು ಹಡಪದ, ಉಪನ್ಯಾಸಕ ಸಿದ್ದಾರೂಢ ಬಿರಾದಾರ, ಸಮಾಜ ಸೇವಕ ಶಿವಯೋಗೆಪ್ಪಾ ಎಸ್.ಬಿರಾದಾರ, ಶಿಕ್ಷಕ ಭೀಮರಾಯ ಎಸ್.ಮುಂಡರಗಿ, ಸುಭಾಷ ಕೇಶ್ವಾರ, ಗಣೇಶ್ ಹಾಗೂ ವಿದ್ಯಾರ್ಥಿಗಳಿದ್ದರು.

# ಮಾದಿಗ ದಂಡೋರ ಎಂಆರ್‌ಪಿಎಸ್‌ನಿಂದ ಪದ್ಮಶ್ರೀ ಮಂದ ಕೃಷ್ಣ ಮಾದಿಗ ಜನ್ಮದಿನ ಆಚರಣೆ



**ಯಾದಗಿರಿ:** ಮಾದಿಗ ಸಮಾಜದ ರಾಷ್ಟ್ರೀಯ ಸಂಸ್ಥಾಪಕ ಅಧ್ಯಕ್ಷರು, ಪದ್ಮಶ್ರೀ ಮಂದ ಕೃಷ್ಣ ಮಾದಿಗ ಅವರ 61ನೇ ಜನ್ಮದಿನವನ್ನು ಮಾದಿಗ ದಂಡೋರ (ಎಂಆರ್‌ಪಿಎಸ್) ಜಿಲ್ಲಾ ಸಮಿತಿ ಹಾಗೂ ಅಭಿಮಾನಿಗಳು ನಗರದ ನೇತಾಜಿ ಸುಭಾಷಚಂದ್ರ ಬೋಸ್ ವೃತ್ತದಲ್ಲಿ ಕೇಕ್ ಕತ್ತರಿಸುವ ಮೂಲಕ ಸಂಭ್ರಮದಿಂದ ಆಚರಿಸಿದರು. ಬಳಿಕ ಹಳೆ ಜಿಲ್ಲಾಸ್ಪತ್ರೆಗೆ ಭೇಟಿ ನೀಡಿ ರೋಗಿಗಳಿಗೆ ಹಣ್ಣು-ಹಂಪಲು ವಿತರಿಸುವ ಮೂಲಕ ಜನ್ಮದಿನವನ್ನು ಅರ್ಥಪೂರ್ಣವಾಗಿ ಆಚರಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಎಂಆರ್‌ಪಿಎಸ್ ರಾಜ್ಯಾಧ್ಯಕ್ಷ ಬಿ. ನರಸಪ್ಪ, ಕಳೆದ 35 ವರ್ಷಗಳಿಂದ ನಿರಂತರ ಹೋರಾಟದ ಮೂಲಕ ಮಾದಿಗ ಸಮಾಜದ ನ್ಯಾಯಯುತ ಹಕ್ಕುಗಳಿಗಾಗಿ ಶ್ರಮಿಸಿದ ಮಂದ ಕೃಷ್ಣ ಮಾದಿಗ ಅವರ ಸೇವೆ ಸಮಾಜಕ್ಕೆ ಅಪಾರವಾಗಿದೆ. ಅವರ ಹೋರಾಟದಿಂದ ಸಮಾಜದ ಅನೇಕ ಬೇಡಿಕೆಗಳು ಈಡೇರಿದ್ದು, ಅವರ ನಾಯಕತ್ವ ಸಮಾಜದ ಇತಿಹಾಸದಲ್ಲಿ ಚಿರಸ್ಥಾಯಿಯಾಗಲಿದೆ ಎಂದು ಹೇಳಿದರು.

ಎಂಆರ್‌ಪಿಎಸ್ ರಾಜ್ಯ ಉಪಾಧ್ಯಕ್ಷ ಹಾಗೂ ನಗರಸಭೆಯ ಮಾಜಿ ಸದಸ್ಯ ಗಣೇಶ್ ದುಪ್ಪಲ್ಲಿ ಮಾತನಾಡಿ, ಸಮಾಜದ ಹೆಸರು ದೇಶದ ಇತಿಹಾಸದಲ್ಲಿ ಅಚ್ಚಳಿಯದೆ ಉಳಿಯಬೇಕಾದರೆ ಇಂತಹ ಮಹಾನ್ ನಾಯಕರ ಆದರ್ಶಗಳನ್ನು ಪ್ರತಿಯೊಬ್ಬರೂ ಜೀವನದಲ್ಲಿ ಅಳವಡಿಸಿಕೊಳ್ಳಬೇಕು. ತಮ್ಮ ಇಡೀ ಜೀವನವನ್ನು ಸಮಾಜದ ಅಭಿವೃದ್ಧಿಗೆ ಸಮರ್ಪಿಸಿದ ಮಂದ ಕೃಷ್ಣ ಮಾದಿಗ ಅವರ ಹೋರಾಟ ಮತ್ತು ತ್ಯಾಗ ಮುಂದಿನ ಪೀಳಿಗೆಗೂ ಸ್ಫೂರ್ತಿಯಾಗಲಿದೆ ಎಂದು ತಿಳಿಸಿದರು.

ಸಮಾಜದ ಹಿರಿಯ ಮುಖಂಡ ಮಲ್ಲಣ್ಣ ದಾಸನಕೇರಿ ಮಾತನಾಡಿ, ಸಮಾಜದ ಮೇಲೆ ನಡೆಯುವ ಅನ್ಯಾಯಗಳ ವಿರುದ್ಧ ಧೈರ್ಯವಾಗಿ ಹೋರಾಡಿ, ಸಮುದಾಯದ ಏಳ್ಗೆಗಾಗಿ ಜೀವನವನ್ನೇ ಮುಡಿಪಾಗಿಟ್ಟ ಮಂದ ಕೃಷ್ಣ ಮಾದಿಗ ಅವರು ಎಲ್ಲರಿಗೂ ಆದರ್ಶ ವ್ಯಕ್ತಿತ್ವ ಎಂದು ಹೇಳಿದರು.

ಹಿರಿಯ ಮುಖಂಡ ಖಂಡಪ್ಪ ದಾಸನ್ ಮಾತನಾಡಿ, ಸಮಾಜದ ಪ್ರಗತಿಗೆ ಇಂತಹ ಮಹಾನ್ ನಾಯಕರ ಕೊಡುಗೆ ಅಮೂಲ್ಯವಾಗಿದ್ದು, ಅವರ ಸೇವೆಯನ್ನು ಸಮಾಜ ಸದಾ ಸ್ಮರಿಸಲಿದೆ ಎಂದರು.

ಲಿಂಗಪ್ಪ ಹತ್ತಿಮನಿ ಮಾತನಾಡಿ, ಸಮಾಜಕ್ಕಾಗಿ ದುಡಿದು, ಸಮಾಜದ ಏಳ್ಗೆಯನ್ನು ತಮ್ಮ ಜೀವನದ ಗುರಿಯನ್ನಾಗಿಸಿಕೊಂಡ ಮಹಾನ್ ನಾಯಕ ಮಂದ ಕೃಷ್ಣ ಮಾದಿಗ ಅವರ ಕಾರ್ಯಚಟುವಟಿಕೆಗಳು ಎಲ್ಲರಿಗೂ ಮಾದರಿಯಾಗಿವೆ ಎಂದು ಹೇಳಿದರು. ಹಿರಿಯ ಮುಖಂಡ ಗೋಪಾಲ ದಾಸನಕೇರಿ ಸಹ ಮಾತನಾಡಿದರು.

ಕಾರ್ಯಕ್ರಮದಲ್ಲಿ ಜಿಲ್ಲಾ ಅಧ್ಯಕ್ಷ ಕಾಶಪ್ಪ ಮಾದಿಗ ಹೆಗ್ಗಣಗೇರಾ, ಹಣಮಂತ ಸೌರಾಷ್ಟ್ರಹಳ್ಳಿ, ಆಂಜನೇಯ ಬಬಲಾದಿ, ಹಣಮಂತ ಅಚ್ಚೋಲ, ವಿಜಯಕುಮಾರ್ ಕಡೆಚೂರ್, ಅಯ್ಯಳಪ್ಪ ಕಂದಕೂರ, ನಾಗರಾಜ್ ಕೊಡೆಕಲ್, ಪೌಡಪ್ಪ ಮ್ಯಾಗೇರಿ, ಪ್ರಧಾನ ಕಾರ್ಯದರ್ಶಿ ಚಂದ್ರು ಮುಂಡರಗಿ, ಉಪಾಧ್ಯಕ್ಷ ಮಲ್ಲು ಬೇಳಗೇರಿ, ಕಾರ್ಯದರ್ಶಿ ಭೀಮಣ್ಣ ಹತ್ತಿಕುಣಿ, ಖಜಾಂಚಿ ಬ್ರಹ್ಮಾನಂದ ಯಾದಗಿರಿ, ಜಿಲ್ಲಾ ಕಾರ್ಯಾಧ್ಯಕ್ಷ ದೇವು ಲಿಂಗೇರಿ, ತಿಪ್ಪಣ್ಣ ಗೋಂದೇನೂರ್, ಯಾದಗಿರಿ ತಾಲೂಕು ಅಧ್ಯಕ್ಷ ಅನಿಲ್ ಕುಮಾರ್ ದಾಸನಕೇರಿ, ಸುರಪುರ ತಾಲೂಕು ಅಧ್ಯಕ್ಷ ಬಸ್ಸು ಹಾದಿಮನಿ, ಶಹಾಪುರ ತಾಲೂಕು ಅಧ್ಯಕ್ಷ ಪರಶುರಾಮ ಪೂಜಾರಿ, ವೆಂಕಟೇಶ್ ಪುಸ್‌ಪಾಕ್, ನರಸಪ್ಪ ಇಟಗಲ್ಲು, ಅನಿಲ್ ಗುರುಮಿಠಕಲ್, ಮಧು ಗಾಜರಕೋಟ್, ವಿಲ್ಸನ್ ಹಾಲಗೇರಾ, ಶರಣಪ್ಪ ಗುಂದೆನೂರ್, ಮಲ್ಲು ಅಚಿಕೇರಿ, ಶ್ಯಾಮ ಅಚಿಕೇರಿ, ಮಲ್ಲು ನಡುವಿನಮನಿ, ಮಲ್ಲು ಕುಮನೂರು, ಮಲ್ಲಪ್ಪ ಕುಮನೂರು, ದುರ್ಗಪ್ಪ ಹೊರುಂಚ ಸೇರಿದಂತೆ ಹಲವರು ಭಾಗವಹಿಸಿದ್ದರು.

# 2027ರ ಮಾರ್ಚ್‌ಗೆ 7ನೇ ರಾಷ್ಟ್ರೀಯ ಹೆದ್ದಾರಿ ಪೂರ್ಣ: ಸಂಸದ ರಮೇಶ ಜಿಗಜಿಣಗಿ

**ವಿಜಯಪುರ, ಜು. 8:** ನಗರಕ್ಕೆ ಮತ್ತೊಂದು ಪ್ರಮುಖ ಸಂಪರ್ಕ ಕಲ್ಪಿಸಲಿರುವ ರಾಷ್ಟ್ರೀಯ ಹೆದ್ದಾರಿ–548ಬಿ (NH–548B) ಕಾಮಗಾರಿ 2027ರ ಮಾರ್ಚ್ ವೇಳೆಗೆ ಪೂರ್ಣಗೊಂಡು ವಾಹನ ಸಂಚಾರಕ್ಕೆ ಮುಕ್ತವಾಗಲಿದೆ ಎಂದು ವಿಜಯಪುರ ಸಂಸದ ರಮೇಶ ಜಿಗಜಿಣಗಿ ತಿಳಿಸಿದ್ದಾರೆ.

ನಿರ್ಮಾಣ ಹಂತದಲ್ಲಿರುವ ಹೆದ್ದಾರಿಯ ವಿವಿಧ ಕಾಮಗಾರಿ ಸ್ಥಳಗಳಿಗೆ ಭೇಟಿ ನೀಡಿ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದ ಅಧಿಕಾರಿಗಳೊಂದಿಗೆ ಪರಿಶೀಲನೆ ನಡೆಸಿದ ಬಳಿಕ ಅವರು ಈ ಮಾಹಿತಿ ನೀಡಿದರು.

ಮಹಾರಾಷ್ಟ್ರದ ಮುರಮ್ ನಿಂದ ವಿಜಯಪುರ ನಗರದ ಸುಭಾಷ್ ಚಂದ್ರ ಬೋಸ್ ವೃತ್ತದವರೆಗೆ ನಿರ್ಮಾಣಗೊಳ್ಳುತ್ತಿರುವ ಈ ಹೆದ್ದಾರಿ ಯೋಜನೆಗೆ 957.09 ಕೋಟಿ ರೂ. ವೆಚ್ಚ ನಿಗದಿಯಾಗಿದ್ದು, ಪ್ರಸ್ತುತ ಕಾಮಗಾರಿಯು ಶೇ. 65ರಷ್ಟು ಪೂರ್ಣಗೊಂಡಿದೆ. ಉಳಿದ ಕಾಮಗಾರಿಯೂ ವೇಗವಾಗಿ ಸಾಗುತ್ತಿದ್ದು, 2027ರ ಮಾರ್ಚನಲ್ಲಿ ಪೂರ್ಣಗೊಳ್ಳಲಿದೆ ಎಂದು ಹೇಳಿದರು.

2025ರ ಜನವರಿ 16ರಂದು ಕಾಮಗಾರಿಗೆ ಚಾಲನೆ ನೀಡಲಾಗಿದ್ದು, ಎರಡು ವರ್ಷಗಳಲ್ಲಿ ಪೂರ್ಣಗೊಳ್ಳಬೇಕಿದ್ದ ಯೋಜನೆ ಕಾರಣಾಂತರಗಳಿಂದ ವಿಳಂಬವಾಗಿದೆ. ಆದರೂ ನಿಗದಿತ ಅವಧಿಯೊಳಗೆ ಉಳಿದ ಕಾಮಗಾರಿ ಮುಗಿಸಲು ಅಧಿಕಾರಿಗಳಿಗೆ ಸೂಚಿಸಲಾಗಿದೆ ಎಂದು ತಿಳಿಸಿದರು.

ಸುಮಾರು 102.303 ಕಿ.ಮೀ. ಉದ್ದದ ಈ ಹೆದ್ದಾರಿ ಮಹಾರಾಷ್ಟ್ರದ ಕರಜಗಿ, ಮಾಶ್ಯಾಳ, ಇಂಡಿ, ರೂಗಿ, ಅಥರ್ಗಾ ಹಾಗೂ ನಾಗಠಾಣ ಸೇರಿದಂತೆ ಒಟ್ಟು ಏಳು ಬೈಪಾಸ್‌ಗಳ ಮೂಲಕ ಸಾಗಲಿದೆ. ಯೋಜನೆಯಡಿ ನಾಲ್ಕು ಬೃಹತ್ ಸೇತುವೆಗಳು ಹಾಗೂ ಒಂದು ರೈಲ್ವೆ ಮೇಲ್ಸೇತುವೆ ನಿರ್ಮಾಣಗೊಳ್ಳಲಿದೆ.



ಈ ಹೆದ್ದಾರಿ ಪೂರ್ಣಗೊಂಡ ಬಳಿಕ ವಿಜಯಪುರ ನಗರಕ್ಕೆ 7ನೇ ರಾಷ್ಟ್ರೀಯ ಹೆದ್ದಾರಿ ಸೇರ್ಪಡೆಯಾಗಲಿದ್ದು, ಕರ್ನಾಟಕ-ಮಹಾರಾಷ್ಟ್ರ ಸಂಪರ್ಕ ಮತ್ತಷ್ಟು ಸುಗಮವಾಗುವುದರೊಂದಿಗೆ ವ್ಯಾಪಾರ, ಕೈಗಾರಿಕೆ, ಪ್ರವಾಸೋದ್ಯಮ ಹಾಗೂ ಸಾರಿಗೆ ಕ್ಷೇತ್ರಗಳಿಗೆ ಹೊಸ ಉತ್ತೇಜನ ದೊರೆಯಲಿದೆ ಎಂದು ಸಂಸದರು ವಿಶ್ವಾಸ ವ್ಯಕ್ತಪಡಿಸಿದರು.

ಪರಿಶೀಲನೆ ವೇಳೆ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದ ಕಾರ್ಯಪಾಲಕ ಅಭಿಯಂತರ ವಿಜಯ ಪಾಟೀಲ, ಯೋಜನಾ ವ್ಯವಸ್ಥಾಪಕ ಮಾರುತಿರಾವ್ ಶಿಂದೆ, ಸಹಾಯಕ ಕಾರ್ಯಪಾಲಕ ಅಭಿಯಂತರ ವಿವೇಕ ಮಠ, ಬಿಜೆಪಿ ಜಿಲ್ಲಾ ಮಾಧ್ಯಮ ಸಂಚಾಲಕ ವಿಜಯ ಜೋಶಿ ಸೇರಿದಂತೆ ಅಧಿಕಾರಿಗಳು ಹಾಗೂ ಮುಖಂಡರು ಉಪಸ್ಥಿತರಿದ್ದರು.

# ಜೆಇಇ ಅಡ್ವಾನ್ಸ್‌ನಲ್ಲಿ ಯಾದಗಿರಿ ಜಿಲ್ಲೆಯ ಗ್ರಾಮೀಣ ಪ್ರತಿಭೆಯ ಸಾಧನೆ



**ಯಾದಗಿರಿ:** ಕಠಿಣ ಸ್ಪರ್ಧಾತ್ಮಕ ಪರೀಕ್ಷೆಗಳ ಪೈಕಿ ಅತ್ಯಂತ ಪ್ರತಿಷ್ಠಿತವೆಂದು ಪರಿಗಣಿಸಲ್ಪಡುವ ಜೆಇಇ ಅಡ್ವಾನ್ಸ್ ಪರೀಕ್ಷೆಯಲ್ಲಿ ಜಿಲ್ಲೆಯ ಸುರಪುರ ತಾಲೂಕಿನ ಏವೂರ ತಾಂಡದ ವಿದ್ಯಾರ್ಥಿ ಶುಭಂ ರಾಠೋಡ ಗಮನಾರ್ಹ ಸಾಧನೆ ಮಾಡಿ ಐಐಟಿ ಪ್ರವೇಶಕ್ಕೆ ಅರ್ಹತೆ ಗಳಿಸುವ ಮೂಲಕ ಯಾದಗಿರಿ ಜಿಲ್ಲೆಯ ಕೀರ್ತಿಯನ್ನು ರಾಷ್ಟ್ರಮಟ್ಟದಲ್ಲಿ ಎತ್ತಿ ಹಿಡಿದಿದ್ದಾನೆ.

ಕಲಬುರಗಿಯ ಶ್ರೀಶರಣಬಸವೇಶ್ವರ ವಸತಿ ಕಾಲೇಜಿನ ವಿದ್ಯಾರ್ಥಿಯಾಗಿರುವ ಶುಭಂ, ಮೊದಲು ಜೆಇಇ ಮೇನ್ ಪರೀಕ್ಷೆಯಲ್ಲಿ ಯಶಸ್ವಿಯಾಗಿ ಅರ್ಹತೆ ಪಡೆದ ನಂತರ ಜೆಇಇ ಅಡ್ವಾನ್ಸ್ ಪರೀಕ್ಷೆಗೆ ಆಯ್ಕೆಯಾಗಿದ್ದ. ಇದೀಗ ಅಡ್ವಾನ್ಸ್ ಪರೀಕ್ಷೆಯಲ್ಲಿ ಶೇ.72 ಅಂಕಗಳನ್ನು ಗಳಿಸಿ ಭಾರತೀಯ ತಾಂತ್ರಿಕ ಸಂಸ್ಥೆಗಳಾದ (ಐಐಟಿ) ಪ್ರವೇಶಕ್ಕೆ ಅರ್ಹತೆ ಪಡೆದಿರುವುದು ಜಿಲ್ಲೆಗೆ ಹೆಮ್ಮೆಯ ಸಂಗತಿಯಾಗಿದೆ.

ಗ್ರಾಮೀಣ ಪ್ರದೇಶದ ಸಾಮಾನ್ಯ ಕುಟುಂಬದಲ್ಲಿ ಜನಿಸಿದ ಶುಭಂ, ಆರ್ಥಿಕ ಸಂಕಷ್ಟಗಳನ್ನು ಮೆಟ್ಟಿನಿಂತು ಶಿಸ್ತು, ಪರಿಶ್ರಮ ಹಾಗೂ ದೃಢ ಸಂಕಲ್ಪದೊಂದಿಗೆ ಓದಿನಲ್ಲಿ ತೊಡಗಿಸಿಕೊಂಡ ಪರಿಣಾಮ ಈ ಮಹತ್ವದ ಸಾಧನೆ ಸಾಧ್ಯವಾಗಿದೆ. ಅವರ ತಂದೆ ಸೇವಲಾಲ ರಾಠೋಡ ಅವರು ಕೆಕೆಆರ್‌ಟಿಸಿ ಸಂಸ್ಥೆಯಲ್ಲಿ ನಿರ್ವಾಹಕರಾಗಿ ಸೇವೆ ಸಲ್ಲಿಸುತ್ತಿದ್ದು, ಕುಟುಂಬದ ಆರ್ಥಿಕ ಸವಾಲುಗಳ ನಡುವೆಯೂ ಮಗನ ಶಿಕ್ಷಣಕ್ಕೆ ಯಾವುದೇ ಕೊರತೆಯಾಗದಂತೆ ಶ್ರಮಿಸಿದ ಪೊಷಕರ ತ್ಯಾಗ ಇಂದು ಸಾರ್ಥಕವಾಗಿದೆ.

ಶುಭಂ ಅವರ ಈ ಸಾಧನೆ ಗ್ರಾಮೀಣ ಭಾಗದ ವಿದ್ಯಾರ್ಥಿಗಳಿಗೆ ಹೊಸ ಆತ್ಮವಿಶ್ವಾಸ ತುಂಬಿದ್ದು, ಸೂಕ್ತ ಗುರಿ, ನಿರಂತರ ಪರಿಶ್ರಮ ಹಾಗೂ ದೃಢ ಮನೋಬಲ ಇದ್ದರೆ ಯಾವುದೇ ಸವಾಲನ್ನು ಜಯಿಸಬಹುದು ಎಂಬುದಕ್ಕೆ ಜೀವಂತ ಉದಾಹರಣೆಯಾಗಿದೆ.

ವಿದ್ಯಾರ್ಥಿಯ ಸಾಧನೆಗೆ ಶಿಕ್ಷಣ ಸಂಸ್ಥೆಯ ಆಡಳಿತ ಮಂಡಳಿ, ಪ್ರಾಂಶುಪಾಲರು, ಉಪನ್ಯಾಸಕರು, ಸಾರ್ವಜನಿಕರು, ವಿವಿಧ ಸಂಘಟನೆಗಳ ಮುಖಂಡರು ಹಾಗೂ ಗಣ್ಯರು ಅಭಿನಂದನೆ ಸಲ್ಲಿಸಿದ್ದು, ಐಐಟಿಯಲ್ಲಿ ಉನ್ನತ ಶಿಕ್ಷಣ ಪಡೆದು ದೇಶದ ಅಭಿವೃದ್ಧಿಗೆ ಕೊಡುಗೆ ನೀಡುವ ಶ್ರೇಷ್ಠ ಇಂಜಿನಿಯರ್ ಆಗಿ ಹೊರಹೊಮ್ಮುವಂತೆ ಶುಭ ಹಾರೈಸಿದ್ದಾರೆ.

# 12 ವರ್ಷಗಳಿಂದ ತಲೆಮರೆಸಿಕೊಂಡಿದ್ದ ನಕಲಿ ಡಿಎಸ್‌ಪಿ ಬಂಧನ; ಬೆಂಗಳೂರಿನಲ್ಲಿ ಆರೋಪಿ ಸೆರೆ

**ವಿಜಯಪುರ, ಜು.8:** ಸುಮಾರು 12 ವರ್ಷಗಳಿಂದ ತಲೆಮರೆಸಿಕೊಂಡಿದ್ದ, ತಾನು ಡಿಎಸ್‌ಪಿ ಎಂದು ನಂಬಿಸಿ ನಿರುದ್ಯೋಗಿ ಯುವಕರಿಗೆ ಪೊಲೀಸ್ ಹಾಗೂ ಇತರೆ ಸರ್ಕಾರಿ ಉದ್ಯೋಗ ಕೊಡಿಸುವುದಾಗಿ ಹೇಳಿ ಲಕ್ಷಾಂತರ ರೂಪಾಯಿ ವಂಚನೆ ಮಾಡುತ್ತಿದ್ದ ಆರೋಪಿಯನ್ನು ವಿಜಯಪುರ ಜಿಲ್ಲೆಯ ಎಪಿಎಂಸಿ ಠಾಣೆ ಪೊಲೀಸರು ಬೆಂಗಳೂರಿನಲ್ಲಿ ಬಂಧಿಸುವಲ್ಲಿ ಯಶಸ್ವಿಯಾಗಿದ್ದಾರೆ.

ಬಂಧಿತನನ್ನು ಬಾಗಲಕೋಟೆ ಜಿಲ್ಲೆಯ ಹುನಗುಂದ ತಾಲೂಕಿನ ವರಗೋಡದಿನ್ನಿ ಗ್ರಾಮದ ಗ್ಯಾನನಗೌಡ @ ಜ್ಞಾನಗೌಡ @ ಗಣೇಶ @ ಸಿ. ಸಂಪತ್‌ಕುಮಾರ (31) ಎಂದು ಗುರುತಿಸಲಾಗಿದೆ.

ಕೊಲೆ ಯತ್ನ ಪ್ರಕರಣದಲ್ಲೂ ಆರೋಪ

2014ರಲ್ಲಿ ವಿಜಯಪುರದ ಎಪಿಎಂಸಿ ಪೊಲೀಸ್ ಠಾಣೆಯಲ್ಲಿ ದಾಖಲಾಗಿದ್ದ ಪ್ರಕರಣದ ಪ್ರಕಾರ, ಆರೋಪಿಯು ಕಾಖಂಡಕಿ ಮೂಲದ ವಿಠ್ಠಲ ಛಾಯಾಗೋಳ ಅವರ ಸಂಬಂಧಿಕನಿಗೆ ಪೊಲೀಸ್ ಉದ್ಯೋಗ ಕೊಡಿಸುವುದಾಗಿ ಹೇಳಿ ?1.20 ಲಕ್ಷ ಪಡೆದುಕೊಂಡಿದ್ದ. ಬಳಿಕ ಹಣವನ್ನು ಮರಳಿಸುವಂತೆ ಒತ್ತಾಯಿಸಿದಾಗ, ಸಹಚರರೊಂದಿಗೆ ಸೇರಿ ದೂರುದಾರರನ್ನು ಅಪಹರಿಸಿ ಕೊಪ್ಪಳ ಜಿಲ್ಲೆಯ ಹುಲಗಿ ಸಮೀಪದ ಕಾಲುವೆಗೆ ಕೈಕಾಲು ಕಟ್ಟಿ ಗೋಣಿಚೀಲದಲ್ಲಿ ಹಾಕಿ ಕೊಲೆ ಮಾಡಲು ಯತ್ನಿಸಿದ್ದಾನೆ ಎಂಬ ಆರೋಪವಿದೆ.

ಈ ಪ್ರಕರಣದಲ್ಲಿ ಬಂಧನಕ್ಕೊಳಗಾಗಿ ಬಳಿಕ ಜಾಮೀನಿನ ಮೇಲೆ ಬಿಡುಗಡೆಯಾಗಿದ್ದ ಆರೋಪಿ ನ್ಯಾಯಾಲಯಕ್ಕೆ ಹಾಜರಾಗದೆ ತಲೆಮರೆಸಿಕೊಂಡಿದ್ದರಿಂದ ಪ್ರಕರಣವನ್ನು ಲಾಂಗ್ ಪೆಂಡಿಂಗ್ ರಿಜಿಸ್ಟರ್ (LPR) ಎಂದು ಪರಿಗಣಿಸಲಾಗಿತ್ತು.

ಮತ್ತೆ ವಂಚನೆ ಪ್ರಕರಣ

ತಲೆಮರೆಸಿಕೊಂಡಿದ್ದ ಅವಧಿಯಲ್ಲಿಯೇ 2026ರಲ್ಲಿ ತಾಳಿಕೋಟೆ ಪೊಲೀಸ್ ಠಾಣೆಯಲ್ಲಿ ಮತ್ತೊಂದು ಪ್ರಕರಣ ದಾಖಲಾಗಿದ್ದು, ತಾನು ಡಿಎಸ್‌ಪಿ ಎಂದು ನಂಬಿಸಿ ಜೈಲರ್ ಹುದ್ದೆ ಕೊಡಿಸುವುದಾಗಿ ಹೇಳಿ ಮುದ್ದೇಬಿಹಾಳ ತಾಲ್ಲೂಕಿನ ವ್ಯಕ್ತಿಯಿಂದ ?8 ಲಕ್ಷ ಪಡೆದು ವಂಚನೆ ಮಾಡಿದ ಆರೋಪವೂ ಎದುರಿಸುತ್ತಿದ್ದಾನೆ.

ತಾಂತ್ರಿಕ ತನಿಖೆಯಿಂದ ಬಂಧನ

ಎಪಿಎಂಸಿ ಠಾಣೆಯ ಪಿಎಸ್‌ಐ ಬಸವರಾಜ ತಿಪ್ಪರೆಡ್ಡಿ ನೇತೃತ್ವದ ತಂಡವು ಆರೋಪಿಯ ವಿವಿಧ ಮೊಬೈಲ್ ಸಂಖ್ಯೆಗಳ ಸ್ಥಳ ಮಾಹಿತಿ ಹಾಗೂ ಇತರೆ ತಾಂತ್ರಿಕ ಮಾಹಿತಿಯ ಆಧಾರದ ಮೇಲೆ ಬೆಂಗಳೂರಿನಲ್ಲಿ ಆತನನ್ನು ಪತ್ತೆಹಚ್ಚಿ ಜುಲೈ 6ರಂದು ವಶಕ್ಕೆ ಪಡೆದು ನ್ಯಾಯಾಲಯಕ್ಕೆ ಹಾಜರುಪಡಿಸಿದೆ.

ಹಲವು ಪ್ರಕರಣಗಳು ದಾಖಲು

ಆರೋಪಿಯ ವಿರುದ್ಧ 2012ರಿಂದ ಮುದ್ದೇಬಿಹಾಳ, ಎಪಿಎಂಸಿ, ಆದರ್ಶನಗರ ಹಾಗೂ ತಾಳಿಕೋಟೆ ಪೊಲೀಸ್ ಠಾಣೆಗಳಲ್ಲಿ ವಂಚನೆ, ಕೊಲೆ ಯತ್ನ, ಶಸ್ತ್ರಾಸ್ತ್ರ ಕಾಯ್ದೆ ಸೇರಿದಂತೆ ವಿವಿಧ ಪ್ರಕರಣಗಳು ದಾಖಲಾಗಿರುವುದು ತನಿಖೆಯಿಂದ ಬೆಳಕಿಗೆ ಬಂದಿದೆ.

12 ವರ್ಷಗಳ ಕಾಲ ತಲೆಮರೆಸಿಕೊಂಡಿದ್ದ ಆರೋಪಿಯನ್ನು ಪತ್ತೆಹಚ್ಚಿ ಬಂಧಿಸಿದ ತನಿಖಾ ತಂಡದ ಕಾರ್ಯವನ್ನು ಜಿಲ್ಲಾ ಪೊಲೀಸ್ ಅಧೀಕ್ಷಕ ಲಕ್ಷ್ಮಣ ನಿಂಬರಗಿ ಶ್ಲಾಘಿಸಿದ್ದಾರೆ.

# ಡಿಜಿಟಲ್ ಆರ್ಥಿಕತೆಯಲ್ಲಿ ಡೇಟಾ ಅತ್ಯಮೂಲ್ಯ ಆಸ್ತಿ




**ಕಲಬುರಗಿ:**ಇಂದಿನ ಡಿಜಿಟಲ್ ಆರ್ಥಿಕತೆಯಲ್ಲಿ ಡೇಟಾ ಅತ್ಯಂತ ಮೌಲ್ಯಯುತ ಆಸ್ತಿಯಾಗಿ ಪರಿಣಮಿಸಿದ್ದು, ಕಚ್ಚಾ ಡೇಟಾವನ್ನು ಅರ್ಥಪೂರ್ಣ ಮಾಹಿತಿಯನ್ನಾಗಿ ಪರಿವರ್ತಿಸುವ ಸಾಮರ್ಥ್ಯ ಹೊಂದಿರುವ ವೃತ್ತಿಪರರಿಗೆ ಡಿಜಿಟಲ್ ಜಗತ್ತಿನಲ್ಲಿ ಉಜ್ವಲ ಭವಿಷ್ಯವಿದೆ ಎಂದು ರೇವಾ ವಿಶ್ವವಿದ್ಯಾಲಯದ ಡಿಜಿಟಲ್ ಆರ್ಥಿಕತೆಯ ತಜ್ಞೆ ಪ್ರೊ. ಪಿ. ಪ್ರಿಯಾಂಕಾ ಅಭಿಪ್ರಾಯಪಟ್ಟರು.

ನಗರದ ಶರಣಬಸವ ವಿಶ್ವವಿದ್ಯಾಲಯದ ಕಂಪ್ಯೂಟರ್ ಅಪ್ಲಿಕೇಶನ್ ನಿಕಾಯದ ಎಂ.ಸಿ.ಎ ವಿಭಾಗದಲ್ಲಿ ಮಂಗಳವಾರ ಆಯೋಜಿಸಿದ್ದ ಐದು ದಿನಗಳ ಕೌಶಲ್ಯಾಭಿವೃದ್ಧಿ ಕಾರ್ಯಕ್ರಮ ಹಾಗೂ "ಪವರ್ ಬಿಐ ಫಾರ್ ಡಾಟಾ ವಿಜುವಲೈಜೆಷನ್ ಆಂಡ್ ಬುಸಿನಸ್ ಅನಾಲಿಟಿಕ್ಸ್" ಕಾರ್ಯಾಗಾರದಲ್ಲಿ ಸಂಪನ್ಮೂಲ ವ್ಯಕ್ತಿಯಾಗಿ ಮಾತನಾಡಿದ ಅವರು, ವಿದ್ಯಾರ್ಥಿಗಳು ವಿಶ್ಲೇಷಣಾತ್ಮಕ ಚಿಂತನೆ ಬೆಳೆಸಿಕೊಳ್ಳುವುದರ ಜೊತೆಗೆ ಪವರ್ ಬಿಐನಂತಹ ಕೈಗಾರಿಕಾ ಗುಣಮಟ್ಟದ ತಂತ್ರಾಂಶಗಳ ಪ್ರಾಯೋಗಿಕ ಅನುಭವವನ್ನು ಪಡೆದುಕೊಳ್ಳಬೇಕು. ವೇಗವಾಗಿ ಬೆಳೆಯುತ್ತಿರುವ ಮಾಹಿತಿ ತಂತ್ರಜ್ಞಾನ ಕ್ಷೇತ್ರದಲ್ಲಿ ಸ್ಪರ್ಧಾತ್ಮಕವಾಗಿರಲು ತಮ್ಮ ತಾಂತ್ರಿಕ ಕೌಶಲ್ಯಗಳನ್ನು ನಿರಂತರವಾಗಿ ನವೀಕರಿಸಿಕೊಳ್ಳುವುದು ಅಗತ್ಯ ಎಂದು ವಿದ್ಯಾರ್ಥಿಗಳಿಗೆ ತಿಳಿಸಿದರು.

ಡೇಟಾ ದೃಶ್ಯೀಕರಣ ಹಾಗೂ ವ್ಯವಹಾರ ವಿಶ್ಲೇಷಣೆ ವಿಷಯಗಳಲ್ಲಿ ಪರಿಣತಿ ಹೊಂದುವುದರಿಂದ ವಿವಿಧ ಕೈಗಾರಿಕೆಗಳಲ್ಲಿ ವಿದ್ಯಾರ್ಥಿಗಳಿಗೆ ಉತ್ತಮ ಉದ್ಯೋಗಾವಕಾಶಗಳು ದೊರೆಯಲಿವೆ. ಈ ಕಾರ್ಯಾಗಾರದ ತಾಂತ್ರಿಕ ಅಧಿವೇಶನಗಳನ್ನು ರೇವಾ ವಿಶ್ವವಿದ್ಯಾಲಯದ ಪ್ರೊ. ಪಿ. ಪ್ರಿಯಾಂಕಾ ಹಾಗೂ ಪ್ರೊ. ಎ. ಸಹನಾ ನಡೆಸಿಕೊಡುತ್ತಿದ್ದು, ಡೇಟಾ ಪರಿವರ್ತನೆ, ದೃಶ್ಯೀಕರಣ ತಂತ್ರಗಳು, ಸಂವಾದಾತ್ಮಕ ಡ್ಯಾಶ್‌ಬೋರ್ಡ್‌ಗಳು, ವರದಿ ಸಿದ್ಧಪಡಿಸುವಿಕೆ ಹಾಗೂ ವ್ಯವಹಾರ ವಿಶ್ಲೇಷಣೆಯ ಅನ್ವಯಿಕೆಗಳ ಕುರಿತು ಪವರ್ ಬಿಐನಲ್ಲಿ ಭಾಗವಹಿಸುವವರಿಗೆ ಪ್ರಾಯೋಗಿಕ ತರಬೇತಿ ನೀಡಲಾಗುತ್ತಿದೆ ಎಂದು ಹೇಳಿದರು.

ಇನ್ಫೋರ್ವ ಸಂಪನ್ಮೂಲ ವ್ಯಕ್ತಿ ಹಾಗೂ ಹಿರಿಯ ಪ್ರಾಧ್ಯಾಪಕರಾದ ಪ್ರೊ. ಬಿ. ವಿ. ಧಾಂದ್ರಾ ಮಾತನಾಡಿ, ಪವರ್ ಬಿಐ ಇಂದು ವಿವಿಧ ಕೈಗಾರಿಕೆಗಳಲ್ಲಿ ಅತ್ಯಂತ ಬೇಡಿಕೆಯಿರುವ ಬಿಸಿನೆಸ್ ಇಂಟೆಲಿಜೆನ್ಸ್ ಸಾಧನಗಳಲ್ಲಿ ಒಂದಾಗಿ ಹೊರಹೊಮ್ಮಿದೆ. ಡೇಟಾ ದೃಶ್ಯೀಕರಣ ಮತ್ತು ವಿಶ್ಲೇಷಣೆಯಲ್ಲಿ ಪರಿಣಿತಿ ಗಳಿಸುವುದರಿಂದ ವಿದ್ಯಾರ್ಥಿಗಳ ತಾಂತ್ರಿಕ ಸಾಮರ್ಥ್ಯ ಹೆಚ್ಚುವುದಲ್ಲದೆ, ಅವರ ನಿರ್ಧಾರ ತೆಗೆದುಕೊಳ್ಳುವ ಕೌಶಲ್ಯ ಹಾಗೂ ಉದ್ಯೋಗಾರ್ಹತೆಯೂ ವೃದ್ಧಿಯಾಗುತ್ತದೆ. ಇಂತಹ ಕೈಗಾರಿಕಾ ಆಧಾರಿತ ಕಾರ್ಯಾಗಾರಗಳನ್ನು ಆಯೋಜಿಸಿರುವುದು ಅತ್ಯಂತ ಸಮಯೋಚಿತ ಕ್ರಮವಾಗಿದ್ದು, ವಿದ್ಯಾರ್ಥಿಗಳು ಇವುಗಳ ಸದುಪಯೋಗ ಪಡೆದು ತಮ್ಮ ಜ್ಞಾನವನ್ನು ವೃದ್ಧಿಸಿಕೊಳ್ಳಬೇಕು ಎಂದು ಅವರು ಕರೆ ನೀಡಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದ ಶರಣಬಸವ ವಿಶ್ವವಿದ್ಯಾಲಯದ ಕಂಪ್ಯೂಟರ್ ಅಪ್ಲಿಕೇಶನ್ ನಿಕಾಯದ ಡೀನ್ ಡಾ. ಶ್ರೀಕಾಂತ್ ಪಾಟೀಲ, ಉದ್ಯೋಗ ಮಾರುಕಟ್ಟೆಯಲ್ಲಿ ಡೇಟಾ ಅನಾಲಿಟಿಕ್ಸ್ ವೃತ್ತಿಪರರಿಗೆ ಹೆಚ್ಚುತ್ತಿರುವ ಬೇಡಿಕೆಯನ್ನು ಉಲ್ಲೇಖಿಸಿ, ವಿದ್ಯಾರ್ಥಿಗಳು ಈ ಕಾರ್ಯಾಗಾರದ ಸಂಪೂರ್ಣ ಪ್ರಯೋಜನ ಪಡೆದು ತಮ್ಮ ಪ್ರಾಯೋಗಿಕ ಜ್ಞಾನವನ್ನು ವೃದ್ಧಿಸಿಕೊಳ್ಳುವ ಮೂಲಕ ಉದ್ಯೋಗಾರ್ಹತೆಯನ್ನು ಹೆಚ್ಚಿಸಿಕೊಳ್ಳಬೇಕು ಎಂದು ಸಲಹೆ ನೀಡಿದರು.

ಈ ಸಂದರ್ಭದಲ್ಲಿ ಎಂ.ಸಿ.ಎ ವಿಭಾಗದ ಬೋಧಕ ಸಿಬ್ಬಂದಿ ಹಾಗೂ ವಿಭಾಗದ ವಿದ್ಯಾರ್ಥಿಗಳು ಉದ್ಘಾಟನಾ ಸಮಾರಂಭದಲ್ಲಿ ಭಾಗವಹಿಸಿದ್ದರು.

# ದಾವಣಗೆರೆ ಬಿಜೆಪಿಯ ಕೆಲ ನಾಯಕರಿಗೆ ಹೃದ್ರೋಗ ಪರೀಕ್ಷೆ ಅಗತ್ಯ: ಬಿವೈವಿ

**ದಾವಣಗೆರೆ, ಜು. 8–** ದಾವಣಗೆರೆ ಜಿಲ್ಲಾ ಬಿಜೆಪಿಯ ಕೆಲ ನಾಯಕರಿಗೆ ಒಳ್ಳೆಯ ಹಾರ್ಟ್ ಸರ್ಜನ್ ಬಳಿ ತಪಾಸಣೆ ಮಾಡಿಸಬೇಕಾಗಿದೆ. ಹೃದಯಲ್ಲಿ ಎಷ್ಟು ಬ್ಲಾಕ್ ಆಗಿದೆಯೆಂದು ಹುಡುಕುವುದಕ್ಕಲ್ಲ, ಹೃದಯ ಇದೆಯೋ ಅಥವಾ ಇಲ್ಲವೋ ಎಂಬುದನ್ನು ಚೆಕ್ ಮಾಡಿಸಲಿಕ್ಕೆ ಟೆಸ್ಟ್ ಮಾಡಿಸಬೇಕಾಗಿದೆ ಎಂದು ಬಿಜೆಪಿ ರಾಜ್ಯಾಧ್ಯಕ್ಷಬಿ.ವೈ.ವಿಜಯೇಂದ್ರ ವೇದಿಕೆಯಿಂದಲೇ ಪಕ್ಷದ ನಾಯಕರಿಗೆ ಮಾತಿನ ಚಾಟಿ ಬೀಸಿದರು.

ನಗರದ ಶ್ರೀನಿಧಿ ಕನ್ವೆನ್ಸನ್ ಹಾಲ್‌ನಲ್ಲಿ ಬಿಜೆಪಿ ಹಮ್ಮಿಕೊಂಡಿದ್ದ ಆಗ್ನೇಯ ಪದವೀಧರರ ಕ್ಷೇತ್ರದ ಚುನಾವಣೆಯ ಪೂರ್ವಭಾವಿ ಸಭೆ ಉದ್ಘಾಟಿಸಿ ಮಾತನಾಡಿದರು. ಯಾವುದೇ ಮುಖಂಡರ ಹೆಸರನ್ನು ಹೇಳಿದರೂ ಚಪ್ಪಾಳೆ ಬರುತ್ತಿಲ್ಲ. ನಾನು ವೈಯಕ್ತಿಕವಾಗಿ ಯಾರಿಗೂ ಈ ಮಾತನ್ನು ಹೇಳುತ್ತಿಲ್ಲ. ಆದರೆ, ಹೃದಯ ಇದೆಯೋ, ಇಲ್ಲವೋ ಎಂಬುದನ್ನು ಹೃದ್ರೋಗ ತಜ್ಞರ ಬಳಿ ಟೆಸ್ಟ್ ಮಾಡಿಸಬೇಕಿದೆ ಎಂದರು.

ರಾಜ್ಯದಲ್ಲಿ ಮತ್ತೆ ಅಧಿಕಾರಕ್ಕೆ ಬರುತ್ತೇವೆಂದು ಕಾರ್ಯಕರ್ತರು ವಿಶ್ವಾಸ ಇಟ್ಟುಕೊಂಡಿದ್ದಾರೆ. ಉಪ ಚುನಾವಣಾ ಫಲಿತಾಂಶ ಆಡಳಿತ ಪಕ್ಷ, ವಿಪಕ್ಷಕ್ಕೆ ಮಾನದಂಡವಾಗಲು ಸಾಧ್ಯವಿಲ್ಲ. ದಾವಣಗೆರೆ ದಕ್ಷಿಣ ಕ್ಷೇತ್ರದ ಉಪ ಚುನಾವಣೆ ಘೋಷಣೆ ಆದಾಗಲೇ ಸೋತಾಗಿದೆ ಎಂದು ಕೆಲವರು ತೀರ್ಮಾನ ಮಾಡಿದ್ದರು. ಆಡಳಿತ ಪಕ್ಷದವರೇ ಈ ತೀರ್ಮಾನ ಮಾಡಿದ್ದರು. ನಮ್ಮ ಮುಖಂಡರು ಇದನ್ನೂ ತೀರ್ಮಾನ ಮಾಡಿದ್ದರು. ಯಾರು ಏನೇ ತೀರ್ಮಾನ ಮಾಡಿದರೂ ನಮ್ಮ ಕಾರ್ಯಕರ್ತರು ಕಡೆಯ ಕ್ಷಣದವರೆಗೂ ಪ್ರಬಲ ಹೋರಾಟ ಮಾಡಿದ್ದನ್ನು ನಾವ್ಯಾರೂ ಮರೆಯಬಾರದು ಎಂದು ಸೂಚ್ಯವಾಗಿ ತಿಳಿಸಿದರು.

ಕಳೆದ ಚುನಾವಣೆಗಿಂತ ಉಪ ಚುನಾವಣೆಯಲ್ಲಿ ಅತಿ ಹೆಚ್ಚು ಮತ ಪಡೆದಿದ್ದೇವೆ. ದಾವಣಗೆರೆ ಜಿಲ್ಲೆಯ ಮಹಾನ್ ನಾಯಕರಲ್ಲಿ ಮನವಿ ಮಾಡುತ್ತೇನೆ. ಕಳೆದ ಉಪ ಚುನಾವಣೆಯಲ್ಲೂ ನಾನು ಹೇಳಿದ್ದೆ. ಇವತ್ತೂ ಸಹ ಹೇಳುತ್ತಿದ್ದೇನೆ. ಹಳೆಯದನ್ನೆಲ್ಲಾ ಮರೆತು, ಎಲ್ಲರೂ ಒಂದಾಗಿ, ಒಗ್ಗಟ್ಟಿನಿಂದ ಹೋಗಬೇಕಾಗಿದೆ. 'ಹೋಗಬೇಕಾಗಿದೆ.



ನಾನಿಲ್ಲದೇ ಪಕ್ಷವೇ ನಡೆಯುವುದಿಲ್ಲ, ನಾನು ಹುಟ್ಟಿದ ಮೇಲೆಯೇ ದಾವಣಗೆರೆ ಜಿಲ್ಲೆಯಲ್ಲಿ ಬಿಜೆಪಿ ಹುಟ್ಟಿದ್ದು ಎಂಬ ಭಾವನೆಯಿಂದ ಮೊದಲು ಹೊರಬನ್ನಿ ಎಂದು ಹೇಳಿದರು.

ಅಂತಹ ಭಾವನೆಯಿಂದ ನಾವು ಹೊರಗೆ ಬರದಿದ್ದರೆ ಇವತ್ತು ಕಾರ್ಯಕರ್ತರು ನಮ್ಮ ಹೆಸರು ಹೇಳಿದಾಗ ಚಪ್ಪಾಳೆ ತಟ್ಟುವುದನ್ನು ನಿಲ್ಲಿಸಿದ್ದಾರೆ. ನಾಳೆ ರಸ್ತೆಯಲ್ಲಿ ಓಡಾಡುವುದು ಸಹಿತ ಕಷ್ಟವಾಗುತ್ತದೆ. ಅದಕ್ಕೆ ಮುಂಚೆಯೇ ನಮ್ಮನ್ನು ನಾವು ಸರಿಪಡಿಸಿಕೊಳ್ಳಬೇಕು. ನಾವು ಒಟ್ಟಾಗಿ ಒಂದಾಗಿ ಹೋಗಬೇಕು. ಮತದಾರರಿಗೆ ನಮ್ಮ ಪಕ್ಷದ ಮೇಲೆ ವಿಶ್ವಾಸ ಶ್ವಾಸ ಬರುವ ಬರುವ ಮೊದಲು ಕಾರ್ಯಕರ್ತರಿಗೆ ಕಾರ್ಯಕರ್ತರಿಗೆ ವಿಶ್ವಾಸ ಬರಬೇಕಿದೆ. ಕಾರ್ಯಕರ್ತರಿಗೆ ವಿಶ್ವಾಸ ಬಂದರೆ, ಮತದಾರರಿಗೂ ವಿಶ್ವಾಸ ಬರುತ್ತದೆ. ಮೊದಲು ನೀವೆಲ್ಲರೂ ಒಂದಾಗಿ ಎಂದು ಕಿವಿಮಾತು ಹೇಳಿದರು.

# ಸುಳ್ಳು ದಾಖಲೆ ಸಲ್ಲಿಸಿ ಹುದ್ದೆ ಪಡೆದ ಆರೋಪ: ವಾರದೊಳಗೆ ಕ್ರಮ ಕೈಗೊಳ್ಳದಿದ್ದರೆ ಧರಣಿ, ಲೋಕಾಯುಕ್ತಕ್ಕೆ ದೂರು

**ಚಿಟಗುಪ್ಪ:** ತುಕ್ಕಪ್ಪ ರೇವಪ್ಪ ಅವರು ಇಟಗಾ ಗ್ರಾಮ ಪಂಚಾಯಿತಿಯ ಕ್ಲರ್ಕ್–ಕಂ–ಡೇಟಾ ಎಂಟ್ರಿ ಆಪರೇಟರ್ ಹುದ್ದೆಗೆ ಸುಳ್ಳು ದಾಖಲೆಗಳನ್ನು ಸಲ್ಲಿಸಿ ಅನುಮೋದನೆ ಪಡೆದಿರುವ ಬಗ್ಗೆ ಸಮಗ್ರ ತನಿಖೆ ನಡೆಸಿ ತಪ್ಪಿತಸ್ಥರ ವಿರುದ್ಧ ಕ್ರಮ ಕೈಗೊಳ್ಳಬೇಕು ಎಂದು ತಾಳಮಡಗಿ ಗ್ರಾಮದ ಸುನೀಲ ಶ್ರೀಮಂತ ಭಾವಿದೊಡ್ಡಿ ಒತ್ತಾಯಿಸಿದ್ದಾರೆ.

ತಾಲೂಕಿನ ತಾಳಮಡಗಿಯಲ್ಲಿ ಮಂಗಳವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಮಾಹಿತಿ ಹಕ್ಕು ಕಾಯ್ದೆಯಡಿ ಪಡೆದ ದಾಖಲೆಗಳ ಪ್ರಕಾರ, ಸಂಬಂಧಪಟ್ಟ ವ್ಯಕ್ತಿ ಇಟಗಾ ಗ್ರಾಮ ಪಂಚಾಯಿತಿಯಲ್ಲಿ ವಾಟಮ್ಯಾನ್ ಆಗಿ ಸೇವೆ ಸಲ್ಲಿಸಿಲ್ಲ. ಆದರೂ ಸುಳ್ಳು ದಾಖಲೆಗಳನ್ನು ಸೃಷ್ಟಿಸಿ ಕ್ಲರ್ಕ್–ಕಂ–ಡೇಟಾ ಎಂಟ್ರಿ ಆಪರೇಟರ್ ಹುದ್ದೆಗೆ ಅನುಮೋದನೆ ಪಡೆದು ನಂತರ ವರ್ಗಾವಣೆ ಹಾಗೂ ನಿಯೋಜನೆ ಮಾಡಿಸಿಕೊಂಡಿ ಸದ್ಯ ತಾಳಮಡಗಿ ಗ್ರಾಮ ಪಂಚಾಯಿತಿಯಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದಾರೆ ಎಂದು ಅವರು ಆರೋಪಿಸಿದರು.ಈ ಕುರಿತು ಜೂನ್ 1, 2026ರಂದು ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ ಲಿಖಿತ ದೂರು ಸಲ್ಲಿಸಿ, ಸಂಬಂಧಿಸಿದ ದಾಖಲೆಗಳನ್ನು ಲಗತ್ತಿಸಿದ್ದರೂ ಒಂದು ತಿಂಗಳು ಕಳೆದರೂ ಯಾವುದೇ ತನಿಖೆ ನಡೆಸಿ ಕ್ರಮ ಕೈಗೊಂಡಿಲ್ಲ ಎಂದು ಅಸಮಾಧಾನ ವ್ಯಕ್ತಪಡಿಸಿದರು.ಸಂಬಂಧಪಟ್ಟ ವ್ಯಕ್ತಿಗೆ ನೆರವು ನೀಡಿದ ಅಧಿಕಾರಿಗಳ ಪಾತ್ರದ ಬಗ್ಗೆಯೂ ಸಮಗ್ರ ತನಿಖೆ ನಡೆಸಿ, ತಪ್ಪಿತಸ್ಥರ ವಿರುದ್ಧ ಕಾನೂನು ಕ್ರಮ ಜರುಗಿಸಬೇಕು. ಕ್ಲರ್ಕ್–ಕಂ–ಡೇಟಾ ಎಂಟ್ರಿ ಆಪರೇಟರ್ ಹುದ್ದೆಯ ಅನುಮೋದನೆಯನ್ನು ರದ್ದುಗೊಳಿಸಬೇಕು



ಎಂದು ಅವರು ಆಗ್ರಹಿಸಿದರು.ಒಂದು ವಾರದೊಳಗೆ ಜಿಲ್ಲಾ ಪಂಚಾಯಿತಿ ಕ್ರಮ ಕೈಗೊಳ್ಳದಿದ್ದರೆ ಗ್ರಾಮ ಪಂಚಾಯಿತಿ ಕಚೇರಿ ಎದುರು ಧರಣಿ ನಡೆಸಲಾಗುವುದು. ಅಲ್ಲದೆ, ಪ್ರಕರಣದ ಕುರಿತು ಲೋಕಾಯುಕ್ತಕ್ಕೆ ದೂರು ಸಲ್ಲಿಸಿ ನ್ಯಾಯಕ್ಕಾಗಿ ಹೋರಾಟ ಮುಂದುವರಿಸಲಾಗುವುದು ಎಂದು ಸುನೀಲ ಎಚ್ಚರಿಕೆ ನೀಡಿದರು.

Owned, and published by SYED AHAMAD HUSSAINI MATWALE from Ward No,21 S S Matwale Hussaini Saheb Dargha, Jummal Doddi, Po-Manvi,Raichur, Karnataka -584123.
Printed at Hulkoti, New Court, Opposite Plot No, 28, RS No 312/3B, Garag Complex, Gadag, Karnataka-582101 Editor: SYED AHAMAD HUSSAINI MATWALE